ಮಂಗಳವಾರ,17.02.2026
ಬೆಂಗಳೂರು, ಬೆಲೆ: 5ರೂ,2 ಪುಟಗಳು
ಸಂಪುಟ 01 – ಸಂಚಿಕೆ 145

Digital Varthe Kannada Daily
Volume 01 - Issue 145
Tuesday, 17.02.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಲವ್ ಪ್ರಪೋಸಲ್ ಒಪ್ಪದಿದ್ದಕ್ಕೆ ಯುವತಿಗೆ ಇರಿದ ಪಾಗಲ್



**ಶಿವಮೊಗ್ಗ:** ಜಿಲ್ಲೆಯ ತೀರ್ಥಹಳ್ಳಿ ತಾಲೂಕಿನ ಆಲ್ಮನೆ ಗ್ರಾಮದಲ್ಲಿ ಪ್ರೇಮ ನಿವೇದನೆ ಒಪ್ಪದಿದ್ದ ಕಾರಣಕ್ಕೆ ಪಾಗಲ್ ಪ್ರೇಮಿಯೊಬ್ಬ ಯುವತಿಗೆ ಬಿಯರ್ ಬಾಟಲ್ ಚೂರಿನಿಂದ ಇರಿದಿರುವ ಗಂಭೀರ ಘಟನೆ ನಡೆದಿದೆ. ಪ್ರೇಮಿಗಳ ದಿನವಾದ ಫೆಬ್ರವರಿ 14ರಂದು ಈ ದುರ್ಘಟನೆ ನಡೆದಿದ್ದು, ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಘಟನೆ ತಿಳಿಯುತ್ತಿದ್ದಂತೆಯೇ ಸ್ಥಳೀಯರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ.

ಮಾಹಿತಿಯ ಪ್ರಕಾರ, ಆರೋಪಿ ಯುವಕ ಸ್ವರೂಪ್ ಪ್ರೇಮಿಗಳ ದಿನಾಚರಣೆಯಂದು ಯುವತಿ ಬಳಿ ತೆರಳಿ ತನ್ನ ಪ್ರೇಮವನ್ನು ವ್ಯಕ್ತಪಡಿಸಿದ್ದಾನೆ. ಕಳೆದ ಕೆಲವು ದಿನಗಳಿಂದಲೂ ಆಕೆಯ ಹಿಂದೆ ಬಿದ್ದಿದ್ದ ಎನ್ನಲಾಗಿದ್ದು, ಫೆಬ್ರವರಿ 14ರಂದು ತನ್ನ ಪ್ರಪೋಸಲ್ ಅನ್ನು ಸ್ಪಷ್ಟವಾಗಿ ಹೇಳಿಕೊಂಡಿದ್ದಾನೆ. ಆದರೆ ಯುವತಿ ಆತನ ಪ್ರಸ್ತಾವವನ್ನು ನಿರಾಕ–ರಿಸಿದ್ದಾಳೆ. ಇದರಿಂದ ಆಕ್ರೋಶಗೊಂಡ ಸ್ವರೂಪ್ ಆಕೆಯ ಮೇಲೆ ಮಾರಣಾಂತಿಕವಾಗಿ ಹಲ್ಲೆ ನಡೆಸಿದ್ದಾನೆ ಎನ್ನಲಾಗಿದೆ.


ಆಕ್ರೋಶದ ತೀವ್ರತೆಯಲ್ಲಿ ಆರೋಪಿ ಬಿಯರ್ ಬಾಟಲ್ ಒಡೆದು ಅದರ ಚೂರಿನಿಂದ ಯುವತಿಯ ಮೇಲೆ ದಾಳಿ ನಡೆಸಿದ್ದಾನೆ. ಈ ಹಲ್ಲೆಯಲ್ಲಿ ಯುವತಿಯ ಕೈ ಹಾಗೂ ಕುತ್ತಿಗೆ ಭಾಗಗಳಿಗೆ ಗಂಭೀರ ಗಾಯಗಳಾಗಿವೆ. ರಕ್ತಸ್ರಾವವಾಗುತ್ತಿದ್ದ ಯುವತಿಯನ್ನು ತಕ್ಷಣ ಸ್ಥಳೀಯರು ಮತ್ತು ಕುಟುಂಬಸ್ಥರು ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಪ್ರಥ–ಮವಾಗಿ ಪಟ್ಟಣದ ಜೆ.ಸಿ. ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿದ್ದು, ಗಾಯಗಳ ತೀವ್ರತೆ ಗಮನಿಸಿ ಹೆಚ್ಚಿನ ಚಿಕಿತ್ಸೆಗೆ ಮಣಿಪಾಲ ಆಸ್ಪತ್ರೆಗೆ ರವಾನಿಸಲಾಗಿದೆ. ಯುವತಿಯ ಸ್ಥಿತಿ ಗಂಭೀರವಾಗಿದ್ದು, ವೈದ್ಯರು ವಿಶೇಷ ಚಿಕಿತ್ಸೆ ನೀಡುತ್ತಿದ್ದಾರೆ.

ಈ ಘಟನೆಗೆ ಸಂಬಂಧಿಸಿದಂತೆ ತೀರ್ಥಹಳ್ಳಿಯ ಪೊಲೀಸ್ ಠಾಣೆಯಲ್ಲಿ ಆರೋಪಿ ಸ್ವರೂಪ್ ವಿರುದ್ಧ ಪ್ರಕರಣ ದಾಖಲಾಗಿದೆ. ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಮುಂದಿನ ತನಿಖೆ ಕೈಗೊಂಡಿದ್ದಾರೆ. ಪ್ರೇಮ ನಿವೇದನೆ ಒಪ್ಪದಿದ್ದ ಕಾರಣಕ್ಕೆ ಇಂತಹ ಕ್ರೂರ ಕೃತ್ಯ ಎಸಗಿರುವುದು ಸಮಾಜದಲ್ಲಿ ಆತಂಕ ಹುಟ್ಟಿಸಿದೆ.

ಇನ್ನೊಂದೆಡೆ, ಯುವತಿಗೆ ಹಲ್ಲೆ ನಡೆಸಿದ ವಿಚಾರ ತಿಳಿಯುತ್ತಿದ್ದಂತೆಯೇ ಯುವತಿಯ ಸಂಬಂಧಿಕರು ಮತ್ತು ಸ್ಥಳೀಯರು ಆಕ್ರೋಶಗೊಂಡಿದ್ದಾರೆ. ಅವರು ಆರೋಪಿ ಸ್ವರೂಪ್ ಮೇಲೆ ದಾಳಿ ನಡೆಸಿದ್ದು, ಈ ವೇಳೆ ಆತನಿಗೂ ತಲೆ ಭಾಗ ಸೇರಿ ದೇಹದ ಹಲವೆಡೆ ಗಾಯಗಳಾಗಿವೆ. ಗಾಯಗೊಂಡ ಸ್ವರೂಪ್‌ನನ್ನು ಕೂಡ ನಗರದ ಜೆ.ಸಿ. ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಒಟ್ಟಾರೆ, ಪ್ರೇಮಿಗಳ ದಿನದಂದೇ ಸಂಭವಿಸಿದ ಈ ದಾರುಣ ಘಟನೆ ಪ್ರೀತಿ ಎಂಬ ಹೆಸರಿನಲ್ಲಿ ನಡೆಯುತ್ತಿರುವ ಅತಿರೇಕದ ವರ್ತನೆಗೆ ಮತ್ತೊಂದು ಉದಾಹರಣೆಯಾಗಿ ಪರಿಣಮಿಸಿದೆ. ಯುವತಿ ಪ್ರಾಣಾಪಾಯದಿಂದ ಪಾರಾಗಲೆಂದು ಕುಟುಂಬಸ್ಥರು ಮತ್ತು ಬಂಧುಗಳು ಪ್ರಾರ್ಥಿಸುತ್ತಿದ್ದು, ಪೊಲೀಸರು ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸುತ್ತಿದ್ದಾರೆ.

## ಮಸೀದಿಯೊಳಗೇ ಅಪ್ರಾಪ್ತ ಬಾಲಕನ ಮೇಲೆ ಹಲ್ಲೆ




**ಮೈಸೂರು:** ಮೈಸೂರು ನಗರದ ಎನ್.ಆರ್. ಮೊಹಲ್ಲಾ ಪ್ರದೇಶದಲ್ಲಿರುವ ಮಸೀದಿಯಲ್ಲಿ ನಮಾಜ್ ಸಮಯದಲ್ಲಿ ಅಪ್ರಾಪ್ತ ಬಾಲಕನ ಮೇಲೆ ಹಲ್ಲೆ ನಡೆಸಿರುವ ಘಟನೆ ಬೆಳಕಿಗೆ ಬಂದಿದೆ. ಫೆಬ್ರವರಿ 13ರಂದು ಶುಕ್ರವಾರದ ನಮಾಜ್ ವೇಳೆ ಈ ಘಟನೆ ನಡೆದಿದ್ದು, ಪವಿತ್ರ ಸ್ಥಳದಲ್ಲೇ ಇಂತಹ ಕ್ರೂರ ಕೃತ್ಯ ನಡೆದಿರುವುದು ಸಾರ್ವಜನಿಕರಲ್ಲಿ ಆಕ್ರೋಶ ಹುಟ್ಟಿಸಿದೆ.

ಲಭ್ಯವಾದ ಮಾಹಿತಿಯ ಪ್ರಕಾರ, ನಮಾಜ್ ನಡೆಯುತ್ತಿದ್ದ ವೇಳೆ ಮೊದಲು ಕೆಲವರ ನಡುವೆ ಮಾತಿನ ಚಕಮಕಿ ಉಂಟಾಗಿದೆ. ಆ ನಂತರ ಪರಿಸ್ಥಿತಿ ತೀವ್ರಗೊಂಡು ಅಪ್ರಾಪ್ತ ಬಾಲಕನ ಮೇಲೆ ಹಲ್ಲೆ ನಡೆದಿದೆ ಎಂದು ತಿಳಿದುಬಂದಿದೆ. ಆರೋಪಿಗಳು ಬಾಲಕನನ್ನು ಅಟ್ಟಾಡಿಸಿ ಹಲ್ಲೆ ಮಾಡಿರುವುದು ಮಾತ್ರವಲ್ಲದೆ, ಕಾಲಿನಿಂದ ಒದ್ದು ಅಮಾನವೀಯವಾಗಿ ವರ್ತಿಸಿರುವ ದೃಶ್ಯಗಳು ಮಸೀದಿಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿವೆ. ವಿಡಿಯೋದಲ್ಲಿ ಬಾಲಕನನ್ನು ಹಿಂಬಾಲಿಸಿ ಹೊಡೆದುರುಳಿಸುತ್ತಿರುವ ದೃಶ್ಯಗಳು ಸ್ಪಷ್ಟವಾಗಿ ಕಾಣುತ್ತಿವೆ ಎಂದು ಮೂಲಗಳು ತಿಳಿಸಿವೆ.

ಘಟನೆ ಸಂಬಂಧ ನರಸಿಂಹರಾಜ ಪೊಲೀಸ್ ಠಾಣೆಯಲ್ಲಿ ಎನ್‌ಸಿಆರ್ ದಾಖಲಿಸಲಾಗಿದೆ. ಬಾಲಕನ ಮೇಲೆ ಹಲ್ಲೆ ನಡೆಸಿದವರಾಗಿ ಅವೇಜ್, ಪರವೇಜ್, ಜಹೀದ್ ಹಾಗೂ ಉಮ್ಮರ್ ಎಂಬವರ ಹೆಸರುಗಳು ಕೇಳಿಬಂದಿವೆ. ಇವರಲ್ಲಿ ಒಬ್ಬನು ರೌಡಿಶೀಟರ್ ಆಗಿದ್ದು, ಈ ವಿಚಾರವನ್ನು ಬಾಲಕನ ತಂದೆ ಗಂಭೀರವಾಗಿ ಆರೋಪಿಸಿದ್ದಾರೆ. ಪೊಲೀಸರು ಈಗಾಗಲೇ ಮೂವರು ಆರೋಪಿಗಳನ್ನು ಬಂಧಿಸಿದ್ದು, ಉಳಿದವರಿಗಾಗಿ ಶೋಧ ಕಾರ್ಯಾಚರಣೆ ಮುಂದುವ–ರಿಸಿದ್ದಾರೆ.

ಹಲ್ಲೆ ನಡೆಸಿದವರು ನಶೆಯಲ್ಲಿದ್ದರು ಎಂಬ ಆರೋಪವೂ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಪೊಲೀಸರು ಆರೋಪಿಗಳನ್ನು ವಿಚಾರಣೆ ನಡೆಸುತ್ತಿದ್ದು, ಸಿಸಿ ಕ್ಯಾಮೆರಾ ದೃಶ್ಯಗಳ ಆಧಾರದ ಮೇಲೆ ಹೆಚ್ಚಿನ ತನಿಖೆ ಕೈಗೊಳ್ಳಲಾಗಿದೆ. ಪ್ರಕರಣದ ಸಂಪೂರ್ಣ ವಿವರಗಳನ್ನು ತಿಳಿದುಕೊಳ್ಳಲು ಪೊಲೀಸರು ಸಾಕ್ಷ್ಯ ಸಂಗ್ರಹಿಸುತ್ತಿದ್ದಾರೆ.

ಪವಿತ್ರ ಸ್ಥಳವಾದ ಮಸೀದಿಯೊಳಗೆ, ಅದೂ ನಮಾಜ್ ಸಮಯದಲ್ಲಿ, ಅಪ್ರಾಪ್ತ ಬಾಲಕನ ಮೇಲೆ ಹಲ್ಲೆ ನಡೆದಿರುವುದು ಸಮಾಜದಲ್ಲಿ ಆತಂಕ ಉಂಟುಮಾಡಿದೆ. ಈ ಘಟನೆ ಮಕ್ಕಳ ಸುರಕ್ಷತೆ ಕುರಿತು ಪೋಷಕರಲ್ಲಿ ಭಯದ ವಾತಾವರಣ ಸೃಷ್ಟಿಸಿದೆ. ಧಾರ್ಮಿಕ ಸ್ಥಳಗಳಲ್ಲಿಯೂ ಭದ್ರತೆ ಪ್ರಶ್ನಾರ್ಥಕವಾಗಿರುವುದು ಚಿಂತಾಜನಕ ವಿಷಯವಾಗಿದೆ.

ಸ್ಥಳೀಯರು ಈ ಘಟನೆಗೆ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಬಾಲಕನ ಮೇಲೆ ಹಲ್ಲೆ ನಡೆಸಿದ ಎಲ್ಲಾ ಆರೋಪಿಗಳನ್ನು ಶೀಘ್ರದಲ್ಲೇ ಬಂಧಿಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಸಿಸಿ ಕ್ಯಾಮೆರಾ ದೃಶ್ಯಗಳನ್ನು ಆಧರಿಸಿ ಪೊಲೀಸರು ಸೂಕ್ತ ಕ್ರಮ ಕೈಗೊಂಡು, ಇಂತಹ ಘಟನೆಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮಗಳನ್ನು ಜಾರಿಗೆ ತರಬೇಕೆಂಬ ಒತ್ತಾಯವೂ ಕೇಳಿಬಂದಿದೆ.

ಒಟ್ಟಾರೆ, ಮಸೀದಿಯೊಳಗೆ ನಡೆದ ಈ ಘಟನೆ ಮೈಸೂರಿನಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದ್ದು, ತನಿಖೆಯ ಫಲಿತಾಂಶದತ್ತ ಸಾರ್ವಜನಿಕರು ಕಾದು ನೋಡುತ್ತಿದ್ದಾರೆ. ಪೊಲೀಸರು ಸಮಗ್ರ ತನಿಖೆ ನಡೆಸಿ ಸತ್ಯಾಂಶ ಬಹಿರಂಗಪಡಿಸಬೇಕೆಂಬುದು ಎಲ್ಲರ ನಿರೀಕ್ಷೆಯಾಗಿದೆ.

## ಸುಬ್ಬಾರೆಡ್ಡಿ ಆಯ್ಕೆ ಅಸಿಂಧು: ಬಿಜೆಪಿ ಪರಾಜಿತ ಅಭ್ಯರ್ಥಿ ಫುಲ್ ಖುಷ್,ಹೇಳಿದ್ದೇನು?





**ಬೆಂಗಳೂರು:** ಬಾಗೇಪಲ್ಲಿ ಶಾಸಕ ಸ್ಥಾನದಿಂದ ಎಸ್. ಎನ್. ಸುಬ್ಬಾರೆಡ್ಡಿ ಆಯ್ಕೆಯನ್ನು ಅಸಿಂಧು ಗೊಳಿಸಿ ಹೈ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಹೈಕೋರ್ಟ್ ತೀರ್ಪಿನಿಂದ ನನಗೆ ಖುಷಿಯಿದೆ, ನ್ಯಾಯ ಸಿಕ್ಕಿದೆ. ಎಸ್.ಎನ್.ಸುಬ್ಬಾರೆಡ್ಡಿ ವಿರುದ್ಧ ಸಾವಿರಾರು ಕೋಟಿ ರೂ ಹಗರಣವಿದೆ. ಕೋರ್ಟ್‌ನಲ್ಲಿ ಸಮರ್ಥವಾಗಿ ವಾದ ಮಂಡಿಸಿದ್ದರಿಂದ ತೀರ್ಪು ಬಂದಿದೆ. ಈ ತೀರ್ಪಿನಿಂದ ನ್ಯಾಯಾಲಯದ ಮೇಲೆ ಜನರಲ್ಲಿ ವಿಶ್ವಾಸ ಹೆಚ್ಚಾಗಿದೆ ಎಂದು ದೂರುದಾರ, ಪರಾಜಿತ ಬಿಜೆಪಿ ಅಭ್ಯರ್ಥಿ ಸಿ.ಮುನಿರಾಜು ಹೇಳಿದ್ದಾರೆ.

**ಎಸ್.ಎನ್. ಸುಬ್ಬಾರೆಡ್ಡಿ ವಿರುದ್ಧ ಸಿ. ಮುನಿರಾಜು ವಾಗ್ದಾಳಿ:** ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಪರಾಜಿತ ಅಭ್ಯರ್ಥಿ ಸಿ. ಮುನಿರಾಜು, ತಪ್ಪು ಮಾಹಿತಿ ಕೊಟ್ಟು ಸರ್ಕಾರ ಮತ್ತು ಚುನಾವಣಾ ಆಯೋಗಕ್ಕೆ ವಂಚನೆ ಮಾಡಿದ್ದನ್ನು ಅರ್ಜಿ ಸಲ್ಲಿಸಿದ್ದೆವು. ಜನರಿಗೆ ಮೋಸ ಮತ್ತು ಸರ್ಕಾರಕ್ಕೆ ವಂಚನೆ ಮಾಡಿರುವುದರಿಂದ ಅವರು ಇಂದು ವಜಾ ಆಗಿದ್ದಾರೆ ಎಂದು ಹೇಳಿದರು.

2023ರ ಅಫಿಡವಿಟ್‌ನಲ್ಲಿ ಹಿಂದಿನ ಅಫಿಡವಿಟ್ ಅನ್ನೇ ಹಾಗೆ ತಂದು ಹಾಕಿದ್ದರು. 9 ಜಿಎಸ್‌ಟಿ ಇದ್ದರೂ ಒಂದೇ ಜಿಎಸ್‌ಟಿ ತೋ–ರಿಸಿದ್ದಾರೆ. ಆ ಮೂಲಕ ಜಿಎಸ್‌ಟಿ ಕಟ್ಟದೇ ಸರ್ಕಾರಕ್ಕೆ ವಂಚನೆ ಮಾಡಿದ್ದಾರೆ. ವಾಸದ ಮನೆ, ಕಮರ್ಷಿಯಲ್ ಕಟ್ಟಡ, ಬಾರ್‌ಗಳ ತೆರಿಗೆಯನ್ನು ನಾಲ್ಕೈದು ವರ್ಷಗಳಿಂದ ಬಿಬಿಎಂಪಿಗೆ ಕಟ್ಟಿರಲಿಲ್ಲ. ಹಿಂದೊಮ್ಮೆ 100 ಕೋಟಿ ರೂ ಜಿಎಸ್‌ಟಿ ಇದ್ದರೂ ಅದನ್ನು 25 ಕೋಟಿಗೆ ಆದೇಶ ಮಾಡಿಸಿಕೊಂಡು ಬೋಗಸ್ ಮಾಡಿಸಿಕೊಂಡಿದ್ದರಂತೆ. ಅವರ ಆಸ್ತಿಗಳನ್ನು ಮುಚ್ಚಿಟ್ಟಿದ್ದರು ಎಂದಿದ್ದಾರೆ.

**ನಾನು ಅರ್ಜಿ ಹಾಕಿದ ಮೇಲೆ ಸರ್ಕಾರಕ್ಕೆ ಜಿಎಸ್‌ಟಿ ತೆರಿಗೆ ಕಟ್ಟಿದ್ದಾರೆ:** ಪುತ್ರಿಯ ಹೆಸ–ರಿನಲ್ಲಿರುವ ಜಮೀನು ವಿವರ ತೋರಿಸಿರಲಿಲ್ಲ. ಪತ್ನಿಯ ಹೆಸರಿನಲ್ಲಿ ಜಮೀನು ಮತ್ತು ಕಂಪನಿ ಇದ್ದರೂ ತೋರಿಸಿರಲಿಲ್ಲ. ಕುಣಿಗಲ್ ಶಾಸಕ ಡಾ. ರಂಗನಾಥ್ ಅವರಿಗೆ 23 ಲಕ್ಷ ರೂ. ದುಡ್ಡು ಕೊಟ್ಟಿದ್ದು ತೋರಿಸಿರಲಿಲ್ಲ. ವೈ.ಎ. ನಾರಾಯಣಸ್ವಾಮಿ ಅವ–ರಿಗೂ 28 ಲಕ್ಷ ರೂ ದುಡ್ಡು ಕೊಟ್ಟಿದ್ದು ತೋ–ರಿಸಿಕೊಂಡಿಲ್ಲ. ನಾನು ಅರ್ಜಿ ಹಾಕಿದ ಮೇಲೆ ಸರ್ಕಾರಕ್ಕೆ ಜಿಎಸ್‌ಟಿ ತೆರಿಗೆ ಕಟ್ಟಿದ್ದಾರೆ. ಸಣ್ಣಪುಟ್ಟ ತಪ್ಪಾಗಿದೆ ಎಂದು ಕೋರ್ಟ್ ಮುಂದೆ ಒಪ್ಪಿಕೊಂಡಿದ್ದಾರೆ ಎಂದರು.

ಬೇನಾಮಿ ಆಸ್ತಿಗಳನ್ನು ತೆಗೆದುಕೊಂಡು ಎಂ.ಬಿ. ಪಾಟೀಲ್ ಹತ್ತಿರ ಕುಳಿತುಕೊಂಡು ಕಡಿಮೆ ಹಣಕ್ಕೆ ಫಿಕ್ಸ್ ಮಾಡಿಕೊಂಡಿದ್ದಾರೆ. ಸಾವಿರಾರು ರೂ ಕೋಟಿ ಹಣವನ್ನು ಲೂಟಿ ಮಾಡಿದ್ದಾರೆ. ನನ್ನನ್ನು ವಿಜೇತ ಎಂದು ಘೋಷಣೆ ಮಾಡಲು ನಾವು ಕೇಳಿದ್ದೆವು. ಕಾನೂನಿನಲ್ಲಿ ಅವಕಾಶ ಇದ್ದರೂ ನ್ಯಾಯಾಧೀಶರು ಅದನ್ನು ಮಾನ್ಯ ಮಾಡಿಲ್ಲ. ನಮ್ಮ ವಕೀಲರು ಮತ್ತು ಹೈಕಮಾಂಡ್ ಜೊತೆ ಚರ್ಚಿಸಿ ಮುಂದಿನ ಹೋರಾಟ ನಿರ್ಧ–ರಿಸಲಾಗುವುದು. ಉಪಚುನಾವಣೆ ಎದುರಾದರೆ ನಾನು ರೆಡಿ ಇದ್ದೇನೆ, ಆದರೆ ಅದು ಹೈಕಮಾಂಡ್ ತೀರ್ಮಾನಕ್ಕೆ ಬದ್ಧ ಎಂದು ಸಿ. ಮುನಿರಾಜು ಹೇಳಿದ್ದಾರೆ.

**ಕಾಂಗ್ರೆಸ್ ವಿರುದ್ಧ ಆರ್.ಅಶೋಕ್ ಕಿಡಿ:** ಬಾಗೇಪಲ್ಲಿ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಆಯ್ಕೆ ಅಸಿಂಧು ವಿಚಾರವಾಗಿ ಎಕ್ಸ್ ಖಾತೆ ಮೂಲಕ ಕಾಂಗ್ರೆಸ್ ವಿರುದ್ಧ ಆರ್.ಅಶೋಕ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ವೋಟ್ ಚೋರಿ ಕಹಾ ಹೈ? ಕಾಂಗ್ರೆಸ್ ಪಾರ್ಟಿ ಮೇ ಹೈ! ರಾಹುಲ್ ಗಾಂಧಿ ಅವರು ಈಗ ಬಾಗೇಪಲ್ಲಿಗೆ ಬಂದು ವೋಟ್ ಚೋರಿ, ಎಲೆಕ್ಷನ್ ಚೋರಿ ವಿರುದ್ಧ ಪ್ರತಿಭಟನೆ ಮಾಡ್ತಾರಾ? ನಮ್ಮ ದೇಶದಲ್ಲಿ ಮತಗಳ್ಳತನ, ಚುನಾವಣಾ ಅಕ್ರಮಕ್ಕೆ ಯಾರಾದರೂ ಪಿತಾಮಹ ಇದ್ದರೆ ಅದು ಕಾಂಗ್ರೆಸ್ ಪಕ್ಷ ಮತ್ತು ರಾಹುಲ್ ಗಾಂಧಿ ಅವರ ಪೂರ್ವಜರು ಎಂದು ವಾಗ್ದಾಳಿ ಮಾಡಿದ್ದಾರೆ.

**ಹಿರಿಯ ವಕೀಲ ನಳೀನಿ ಮಾಯಗೌಡ ಹೇಳಿದ್ದಿಷ್ಟು** : ಹಿರಿಯ ವಕೀಲ ನಳೀನಿ ಮಾಯಗೌಡ ಹೇಳಿಕೆ ನೀಡಿದ್ದು, ಸುಬ್ಬಾರೆಡ್ಡಿ ಅವರು ಪ್ರಾಪರ್ಟಿ ಡಿಸ್ಕ್ಲೋಸ್ ಮಾಡಿರಲಿಲ್ಲ. ಜಿಎಸ್‌ಟಿ ಫೈಲ್ ಮಾಡಿರಲಿಲ್ಲ. ಇದೇ ಕಾರಣಕ್ಕಾಗಿ ಸುಬ್ಬಾರೆಡ್ಡಿ ಅವರನ್ನ ಹೈಕೋರ್ಟ್ ಅಸಿಂಧು ಮಾಡಿದೆ. ಇದರ ಜೊತೆ ನನ್ನನ್ನ ಶಾಸಕನಾಗಿ ಘೋಷಣೆ ಮಾಡಿ ಎಂದು ಮುನಿರಾಜು ಅವರು ಕೇಳಿದರು. ಈಗ ಎರಡೂವರೆ ವರ್ಷ ವಾದ ಮಾಡಿ ಕೋರ್ಟ್ ಅಸಿಂಧು ಮಾಡಿದೆ. ಶಾಸಕರನ್ನ ಅನರ್ಹ ಮಾಡಿದೆ, ಈಗ ಅವರು ಶಾಸಕರು ಅಲ್ಲ. ಒಂದು ವೇಳೆ ಸುಬ್ಬಾರೆಡ್ಡಿ ಅವರು ಸುಪ್ರೀಂ ಕೋರ್ಟ್‌ಗೆ ಹೋದರೆ ಹೈಕೋರ್ಟ್ ಆದೇಶ ಸ್ಟೇ ಆಗಬಹುದು ಎಂದು ಮಾಹಿತಿ ನೀಡಿದರು.

ಎರಡು ಕೋಟಿ ರೂ.ಯಷ್ಟು ತೆರಿಗೆ ಕಟ್ಟಿಲ್ಲ, ಶಾಸಕರು ಆಗಿರುವವರೇ ಟ್ಯಾಕ್ಸ್ ಕಟ್ಟಿಲ್ಲ ಎಂದು ವಾದ ಮಾಡಿದ್ದೇವೆ. ಹೀಗಾಗಿ ಇವರನ್ನ ಮುಂದುವರಿಯುವುದಕ್ಕೆ ಬಿಡಬಾರದು ಎಂದು ವಾದಿಸಿದ್ದೇವೆ. ಸುಪ್ರೀಂ ಕೋರ್ಟ್‌ನವರು ಕೂಡ ನಮ್ಮ ವಾದಕ್ಕೆ ಅವರು ತೀರ್ಪು ಕೊಡಬಹುದು. ಇಲ್ಲಂದರೆ ಹೊಸ ಚುನಾವಣೆಗೆ ಹೋಗಬಹುದು. ಮುನಿರಾಜು ಗೆಲುವು ಅಂತ ಕೋರ್ಟ್ ಹೇಳಿಲ್ಲ, ಇದಕ್ಕೆ ಕಾರಣವೂ ಕೊಟ್ಟಿಲ್ಲ. ಎರಡನೇ ಅತೀ ಹೆಚ್ಚು ಮತ ತೆಗೆದುಕೊಂಡಿದ್ದು ಮುನಿರಾಜು ಅವರು. ಅವರು ತೀರ್ಮಾನ ಮಾಡಿದರೆ ಸುಪ್ರೀಂ ಕೋರ್ಟ್‌ಗೆ ಹೋಗಬಹುದು. ಗೆಜೆಟ್ ನೋಟಿಫಿಕೇಶನ್ ಆದ–'ರೆ ಅನರ್ಹ ಎಂದು ಆದೇಶ ಆಗುತ್ತದೆ ಎಂದಿದ್ದಾರೆ.

## ಕರ್ತವ್ಯನಿರತ ಅಧಿಕಾರಿ ಮೇಲೆ ರಚಿತಾ ರಾಮ್ ಕಾರ್ ಡ್ರೈವರ್ ಹಲ್ಲೆ



**ಹಂಪಿ:**ಆಯೋಜಿಸಲಾಗಿದ್ದ ವಿಶ್ವ ವಿಖ್ಯಾತ 'ಹಂಪಿ ಉತ್ಸವ–2026'ರ ಸಮಾ ರೋಪ ಸಮಾ ರಂಭದ ವೇಳೆ ಅಹಿತಕರ ಘಟನೆ ಸಂಭವಿಸಿರುವುದು ಬೆಳಕಿಗೆ ಬಂದಿದೆ. ಹೊಸಪೇಟೆ ತಾಲೂಕಿನ ಈ ಐತಿಹಾಸಿಕ ತಾಣದಲ್ಲಿ ನಡೆದ ಕಾರ್ಯಕ್ರಮದ ಸಂದರ್ಭದಲ್ಲಿ ಸ್ಯಾಂಡಲ್‌ವುಡ್‌ನ ಖ್ಯಾತ ನಟಿ 'ಡಿಂಪಲ್ ಕ್ವೀನ್' ಎಂದೇ ಗುರುತಿಸಿಕೊಂಡಿರುವ ರಚಿತಾ ರಾಮ್ ಅವರ ಕಾರು ಚಾಲಕ ಕರ್ತವ್ಯನಿರತ ಸರ್ಕಾರಿ ಅಧಿಕಾರಿಯ ಮೇಲೆ ಹಲ್ಲೆ ನಡೆಸಿದ್ದಾನೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.

**ಘಟನೆ ಹೇಗೆ ನಡೆದಿದೆ?:** ಹಂಪಿ ಉತ್ಸವದ ಕೊನೆಯ ದಿನವಾಗಿದ್ದರಿಂದ ಭರ್ಜರಿ ಸಾಂಸ್ಕೃತಿಕ ಕಾರ್ಯಕ್ರಮಗಳು, ಸಂಗೀತ–ನೃತ್ಯ ಪ್ರದರ್ಶನಗಳು ಮತ್ತು ಗಣ್ಯರ ಆಗಮನದಿಂದ ವಾತಾವರಣ ಉತ್ಸವಮಯವಾಗಿತ್ತು. ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಜನರು ಈ ಸಮಾರೋಪ ಸಮಾರಂಭವನ್ನು ಕಣ್ತುಂಬಿಕೊಂಡಿದ್ದರು. ಇದೇ ಕಾರ್ಯಕ್ರಮದಲ್ಲಿ ಭಾಗವಹಿಸಲು ನಟಿ ರಚಿತಾ ರಾಮ್ ಅವರು ವಿಶೇಷ ಅತಿಥಿಯಾಗಿ ಆಗಮಿಸಿದ್ದರು.

ಈ ವೇಳೆ ನಟಿಯ ವಾಹನದ ಸಂಚಾರ ಹಾಗೂ ವೇದಿಕೆ ಪ್ರವೇಶದ ವಿಚಾರವಾಗಿ ಕೆಲವು ಗೊಂದಲಗಳು ಉಂಟಾಗಿದ್ದವು ಎನ್ನಲಾಗಿದೆ. ಮೂಲಗಳ ಪ್ರಕಾರ, ಈ ಸಂದರ್ಭದಲ್ಲೇ ರಚಿತಾ ರಾಮ್ ಅವರ ಕಾರು ಚಾಲಕ ಅತಿರೇಕವಾಗಿ ವರ್ತಿಸಿದ್ದಾನೆ. ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರಾಗಿ ಕಾರ್ಯನಿರ್ವ ಸುತ್ತಿರುವ ರವಿಕುಮಾರ್ ಎಂಬ ಸರ್ಕಾರಿ ಅಧಿಕಾರಿ ಕಾಯ ೯ಕ್ರಮದ ವ್ಯವಸ್ಥಾಪನೆಯಲ್ಲಿ ತೊಡಗಿಸಿಕೊಂಡಿದ್ದ ವೇಳೆ ಮಾತಿನ ಚಕಮಕಿ ನಡೆದಿದೆ ಎಂದು ತಿಳಿದುಬಂದಿದೆ.

**ಮಾತಿನ ಜಗಳದಿಂದ ಹಲ್ಲೆಗೆ ತಿರುಗಿದ ಘಟನೆ** ಮಾತಿಗೆ ಮಾತು ಬೆಳೆದು ಪರಿಸ್ಥಿತಿ ಉದ್ವಿಗ್ನಗೊಂಡಿದ್ದು, ಆಕ್ರೋಶಗೊಂಡ ಚಾಲಕ ಅಧಿಕಾರಿಯ ಮೇಲೆ ದೈಹಿಕವಾಗಿ ಹಲ್ಲೆ ನಡೆಸಿದ್ದಾನೆ ಎಂಬ ಆರೋಪ ಕೇಳಿಬಂದಿದೆ. ವಿಶೇಷವಾಗಿ ಅಧಿಕಾರಿಯ ಮುಖ ಹಾಗೂ ಕಣ್ಣಿನ ಭಾಗಕ್ಕೆ ಬಲವಾಗಿ ಗುದ್ದಿರುವುದಾಗಿ ತಿಳಿದುಬಂದಿದೆ. ಸಾರ್ವಜನಿಕರ ಮುಂದೆ ನಡೆದ ಈ ಘಟನೆ ಕ್ಷಣಾರ್ಧದಲ್ಲಿ ಆತಂಕ ಸೃಷ್ಟಿಸಿತು.

ಹಲ್ಲೆಯಿಂದ ಅಧಿಕಾರಿ ರವಿಕುಮಾರ್ ಅವರ ಕಣ್ಣಿನ ಭಾಗಕ್ಕೆ ತೀವ್ರ ಸ್ವರೂಪದ ಗಾಯಗಳಾಗಿವೆ. ಏಟಿನ ಪರಿಣಾಮವಾಗಿ ಕಣ್ಣಿನ ಸುತ್ತಲಿನ ಭಾಗ ಊದಿಕೊಂಡಿದ್ದು, ರಕ್ತಸ್ರಾವವೂ ಸಂಭವಿಸಿದೆ ಎಂದು ಮೂಲಗಳು ತಿಳಿಸಿವೆ. ತಕ್ಷಣವೇ ಸ್ಥಳೀಯ ಆಸ್ಪತ್ರೆಗೆ ಅವರನ್ನು ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ವೈದ್ಯರು ಹೆಚ್ಚಿನ ಪರೀಕ್ಷೆಗಳನ್ನು ನಡೆಸುತ್ತಿದ್ದಾರೆ ಎಂದು ತಿಳಿದುಬಂದಿದೆ.

**ಸಾರ್ವಜನಿಕ ಆಕ್ರೋಶ:** ಹಂಪಿ ಉತ್ಸವದಂತಹ ಅಂತರಾಷ್ಟ್ರೀಯ ಮಟ್ಟದ ಕಾರ್ಯಕ್ರಮದಲ್ಲಿ, ಅದೂ ಕರ್ತವ್ಯನಿರತ ಸರ್ಕಾರಿ ಅಧಿಕಾರಿಯ ಮೇಲೆ ಸಾರ್ವಜನಿಕವಾಗಿ ಹಲ್ಲೆ ನಡೆದಿರುವುದು ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದೆ. ಉತ್ಸವದ ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿ ಹೊತ್ತಿರುವ ಅಧಿಕಾರಿಯ ಮೇಲೆ ಕೈ ಮಾಡಿರುವುದು ಕಾನೂನ ಬಾಹಿರ ಕೃತ್ಯ ವಾಗಿದ್ದು, ಇದು ಸರ್ಕಾರಿ ವ್ಯವಸ್ಥೆಯ ಗೌರವಕ್ಕೂ ಧಕ್ಕೆ ತಂದಿದೆ ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ.

ಕಲಾವಿದರಿಗೆ ಭದ್ರತೆ ಒದಗಿಸುವುದು ಅನಿವಾಯ ೯ವಾದರೂ, ಅದನ್ನು ನೆಪ ಮಾಡಿಕೊಂಡು ಅಹಂಕಾರ ದಿಂದ ಅಥವಾ ಅತಿ–ರೇಕವಾಗಿ ವರ್ತಿಸುವುದು ಸರಿಯೇ ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಮೂಡಿದೆ. ಸ್ಟಾರ್ ನಟಿಯ ಜೊತೆಗಿದ್ದೇವೆ ಎಂಬ ಕಾರಣಕ್ಕೆ ಗೂಂಡಾನಂತೆ ವರ್ತಿಸುವುದು ಅಸಂಗತ ಮತ್ತು ಖಂಡನೀಯ ಎಂದು ಸ್ಥಳೀಯರು ತಿಳಿಸಿದ್ದಾರೆ.

**ಕಠಿಣ ಕ್ರಮಕ್ಕೆ ಆಗ್ರಹ:** ಘಟನೆಗೆ ಸಂಬಂಧಿಸಿದಂತೆ ಚಾಲಕನ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಹಾಗೂ ವಿವಿಧ ಸರ್ಕಾರಿ ನೌಕರರ ಸಂಘಗಳು ಆಗ್ರಹಿಸುತ್ತಿವೆ. ಇಂತಹ ಘಟನೆಗಳು ಮರುಕಳಿಸದಂತೆ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಬೇಕೆಂಬ ಬೇಡಿಕೆಯೂ ಕೇಳಿಬಂದಿದೆ.

ಒಟ್ಟಾರೆ, ಹಂಪಿ ಉತ್ಸವದ ಸಮಾರೋಪ ಸಮಾರಂಭದಲ್ಲಿ ಸಂಭವಿಸಿದ ಈ ಅಹಿತಕರ ಘಟನೆ ಉತ್ಸವದ ಸಂತಸದ ವಾತಾವರಣಕ್ಕೆ ಮಸುಕು ತಂದಿದ್ದು, ಘಟನೆ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂಬುದು ಸಾರ್ವಜನಿಕರ ಒತ್ತಾಯವಾಗಿದೆ.

## ಕೆಮಿಕಲ್ ಫ್ಯಾಕ್ಟರಿಯಲ್ಲಿ ಸ್ಫೋಟ–7 ಮಂದಿ ಸಾವು



ಜೈಪುರ: ಭಿವಾಡಿಯಲ್ಲಿರುವ ರಾಸಾಯನಿಕ ಕಾರ್ಖಾನೆಯಲ್ಲಿ ಸಂಭವಿಸಿದ ಭಾರೀ ಅಗ್ನಿ ಅವಘಡವು ಭೀಕರ ದುರಂತಕ್ಕೆ ಕಾರಣವಾಗಿದೆ. ಈ ದುರ್ಘಟನೆಯಲ್ಲಿ ಕನಿಷ್ಠ 7 ಕಾರ್ಮಿಕರು ಸಜೀವ ದಹನಗೊಂಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದ್ದು, ಇನ್ನೂ ಹಲವರು ಅವಶೇಷಗಳಡಿ ಸಿಲುಕಿರುವ ಸಾಧ್ಯತೆ ವ್ಯಕ್ತವಾಗಿದೆ. ಘಟನೆ ಸ್ಥಳದಲ್ಲಿ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ.

ಮೂಲಗಳ ಪ್ರಕಾರ, ಇಂದು ಬೆಳಿಗ್ಗೆ ಸುಮಾರು 9:30ರ ಸುಮಾರಿಗೆ ಕಾರ್ಖಾನೆಯಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ. ಆ ಸಮಯದಲ್ಲಿ ಕಾರ್ಖಾನೆಯೊಳಗೆ ಸುಮಾರು 20ರಿಂದ 25 ಮಂದಿ ಕಾರ್ಮಿಕರು ಕರ್ತವ್ಯ ನಿರ್ವಹಿಸುತ್ತಿದ್ದರು ಎಂದು ತಿಳಿದುಬಂದಿದೆ. ರಾಸಾಯನಿಕ ವಸ್ತುಗಳು ಸಂಗ್ರಹವಾಗಿದ್ದ ಕಾರಣ ಬೆಂಕಿ ಕೆಲವೇ ನಿಮಿಷಗಳಲ್ಲಿ ವ್ಯಾಪಕವಾಗಿ ಹರಡಿಕೊಂಡು ಸಂಪೂರ್ಣ ಕಾರ್ಖಾನೆಯನ್ನು ಆವರಿಸಿತು. ದಟ್ಟ ಹೊಗೆ ಮತ್ತು ಉರಿಯುತ್ತಿರುವ ಜ್ವಾಲೆಗಳ ನಡುವೆ ಕೆಲವು ಕಾರ್ಮಿಕರು ತಕ್ಷಣ ಹೊರಗೆ ಓಡಿ ಬಂದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಆದರೆ, ಒಳಗೆ ಸಿಲುಕಿದ್ದ ಕೆಲವರು ತಪ್ಪಿಸಿಕೊಳ್ಳಲು ಸಾಧ್ಯವಾಗಿಲ್ಲ ಎಂಬುದು ದುಃಖಕರ ಸಂಗತಿ.

ಘಟನೆಯ ಮಾಹಿತಿ ತಿಳಿದ ತಕ್ಷಣ ಸ್ಥಳೀಯ ಪೊಲೀಸರು, ಅಗ್ನಿಶಾಮಕ ದಳದ ಸಿಬ್ಬಂದಿ ಹಾಗೂ ತುರ್ತು ವೈದ್ಯಕೀಯ ತಂಡಗಳು ಘಟನಾ ಸ್ಥಳಕ್ಕೆ ದೌಡಾಯಿಸಿವೆ. ಹೆಚ್ಚುವರಿ ಜಿಲ್ಲಾ ಮ್ಯಾಜಿಸ್ಟ್ರೇಟ್ ಸುಮಿತಾ ಮಿಶ್ರಾ ಈ ಕುರಿತು ಮಾತನಾಡಿ, ಈ ಪ್ರದೇಶದಲ್ಲಿ ಪೊಲೀಸರು ದಿನನಿತ್ಯ ಗಸ್ತು ತಿರುಗುವ ಸಂದರ್ಭದಲ್ಲೇ ಬೆಂಕಿ ಅವಘಡ ಬೆಳಕಿಗೆ ಬಂದಿದೆ ಎಂದು ತಿಳಿಸಿದ್ದಾರೆ. ಕೂಡಲೇ ರಕ್ಷಣಾ ಕಾರ್ಯಾಚರಣೆ ಆರಂಭಿಸಲಾಯಿತು.

ಅಗ್ನಿಶಾಮಕ ಸಿಬ್ಬಂದಿ ಸುಮಾರು ಒಂದೂವರೆ ಗಂಟೆಗಳ ಕಾಲ ನಿರಂತರ ಪ್ರಯತ್ನ ನಡೆಸಿ ಬೆಂಕಿಯನ್ನು ನಿಯಂತ್ರಣಕ್ಕೆ ತರಲು ಯಶಸ್ವಿಯಾದರು. ಬೆಂಕಿಯ ತೀವ್ರತೆಯಿಂದಾಗಿ ಕಾರ್ಯಾಚರಣೆ ಕಷ್ಟಕರವಾಗಿದ್ದು, ಭಾರೀ ಪ್ರಮಾಣದ ನೀರು ಮತ್ತು ಅಗ್ನಿ ನಿಗ್ರಹ ಸಾಧನಗಳನ್ನು ಬಳಸಬೇಕಾಯಿತು. ಗಾಯಗೊಂಡವರನ್ನು ತಕ್ಷಣ ಸಮೀಪದ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ನೀಡಲಾಗುತ್ತಿದೆ.

ಈ ಅವಘಡಕ್ಕೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ರಾಸಾಯನಿಕ ಕಾರ್ಖಾನೆಯಾಗಿರುವುದರಿಂದ ಸುರಕ್ಷತಾ ನಿಯಮಗಳನ್ನು ಪಾಲಿಸಲಾಗಿತ್ತೇ ಎಂಬ ಪ್ರಶ್ನೆಯೂ ಉದ್ಭವಿಸಿದೆ. ಘಟನೆ ಕುರಿತು ತಿಜಾರಾ ಉಪ ಪೊಲೀಸ್ ವರಿಷ್ಠಾಧಿಕಾರಿ ಶಿವರಾಜ್ ಸಿಂಗ್ ಅವರು ಸ್ಥಳದಲ್ಲೇ ಪ್ರಾಥಮಿಕ ತನಿಖೆ ನಡೆಸುತ್ತಿದ್ದಾರೆ. ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಎಡಿಎಂ ಸೇ–ರಿದಂತೆ ಹಿರಿಯ ಅಧಿಕಾರಿಗಳು ಪರಿಸ್ಥಿತಿಯ ಸಮಗ್ರ ಪರಿಶೀಲನೆ ನಡೆಸುತ್ತಿದ್ದಾರೆ. ಬೆಂಕಿ ಕಾಣಿಸಿಕೊಳ್ಳಲು ಕಾರಣವಾದ ಅಂಶಗಳನ್ನು ಪತ್ತೆಹಚ್ಚಲು ಜಿಲ್ಲಾಡಳಿತವು ಮ್ಯಾಜಿಸ್ಟೀರಿಯಲ್ ತನಿಖೆಗೆ ಆದ–'ೇಶಿಸಿದೆ.

ಈ ದುರಂತದ ಹಿನ್ನೆಲೆಯಲ್ಲಿ ನರೇಂದ್ರ ಮೋದಿ ಅವರು ಸಂತಾಪ ಸೂಚಿಸಿದ್ದಾರೆ. ರಾಜಸ್ಥಾನದ ಭಿವಾಡಿಯಲ್ಲಿ ಸಂಭವಿಸಿದ ಅಗ್ನಿ ಅವಘಡವು ಅತ್ಯಂತ ದುಃಖಕರ ಘಟನೆ ಎಂದು ಅವರು ತಿಳಿಸಿದ್ದಾರೆ. ಗಾಯಗೊಂಡವರು ಶೀಘ್ರ ಚೇತರಿಸಿಕೊಳ್ಳಲಿ ಹಾಗೂ ಮೃತರ ಆತ್ಮಗಳಿಗೆ ಶಾಂತಿ ಸಿಗಲಿ ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಪ್ರಾರ್ಥಿಸಿದ್ದಾರೆ.

ಒಟ್ಟಾರೆ, ಭಿವಾಡಿಯ ರಾಸಾಯನಿಕ ಕಾರ್ಖಾನೆಯಲ್ಲಿ ಸಂಭವಿಸಿದ ಈ ಭಾರೀ ಅಗ್ನಿ ಅವಘಡವು ಕಾರ್ಮಿಕರ ಸುರಕ್ಷತೆ ಕುರಿತಂತೆ ಗಂಭೀರ ಪ್ರಶ್ನೆಗಳನ್ನು ಎಬ್ಬಿಸಿದ್ದು, ತನಿಖೆಯ ವರದಿ ನಂತರವೇ ಘಟನೆಯ ನಿಖರ ಕಾರಣ ಸ್ಪಷ್ಟವಾಗಲಿದೆ.

## ಶಿವರಾತ್ರಿ ಜಾಗರಣೆಗೆ ಹೋಗಿದ್ದವರ ಮನೆಗೆ ಕನ್ನ– 154 ಗ್ರಾಂ ಚಿನ್ನ, 270 ಗ್ರಾಂ ಬೆಳ್ಳಿ ಕಳ್ಳತನ

**ವಿಜಯಪುರ:**ಮಹಾಶಿವರಾತ್ರಿ ಜಾಗ ರಣೆಯ ಸಂದರ್ಭವನ್ನು ಬಂಡವಾಳ ಮಾಡಿಕೊಂಡು ಖದೀಮರು ಮನೆ ಕಳ್ಳತನ ನಡೆಸಿರುವ ಘಟನೆ ವಿಜಯಪುರ ನಗರದ ಶಾರದಾ ನಗರ ಪ್ರದೇಶದಲ್ಲಿ ಬೆಳಕಿಗೆ ಬಂದಿದೆ. ಹಬ್ಬದ ಸಂದರ್ಭದಲ್ಲಿ ಮನೆ ಖಾಲಿ ಇರುವುದು ಗಮನಿಸಿ ಕಳ್ಳರು ಸೂಕ್ಷ್ಮವಾಗಿ ಸಂಚು ರೂಪಿಸಿ ದಾಳಿ ನಡೆಸಿರುವುದು ಸ್ಥಳೀಯರಲ್ಲಿ ಆತಂಕ ಮೂಡಿಸಿದೆ.

ಶಾರದಾ ನಗರದಲ್ಲಿರುವ ಸೋಮಶೇಖರ ಗಣಿ ಎಂಬವರ ಮನೆಯಲ್ಲಿ ಈ ಕಳ್ಳತನ ನಡೆದಿದೆ. ಮಹಾಶಿವರಾತ್ರಿ ಪ್ರಯುಕ್ತ ಕುಟುಂಬಸ್ಥರು ಮನೆಗೆ ಬೀಗ ಹಾಕಿ ಶಿವಗಿರಿ ದೇವಾಲಯಕ್ಕೆ ಜಾಗರಣೆಗೆ ತೆರಳಿದ್ದರು. ಈ ವೇಳೆ ಮನೆಯನ್ನು ಗುರಿಯಾಗಿಸಿಕೊಂಡ ಖದೀಮರು ಬೀಗ ಒಡೆದು ಒಳನುಗ್ಗಿ ಮನೆಯಲ್ಲಿದ್ದ ಮೌಲ್ಯವಾದ ವಸ್ತುಗಳನ್ನು ದೋಚಿಕೊಂಡು ಪರಾರಿಯಾಗಿದ್ದಾರೆ.

ಮೂಲಗಳ ಪ್ರಕಾರ, ಮನೆಯಲ್ಲಿದ್ದ ಸುಮಾರು 40 ಸಾವಿರ ರೂಪಾಯಿ ನಗದು, 154 ಗ್ರಾಂ ಚಿನ್ನಾಭರಣ ಹಾಗೂ 270 ಗ್ರಾಂ ಬೆಳ್ಳಿ ಆಭರಣಗಳನ್ನು ಕಳ್ಳರು ಕದ್ದೊಯ್ದಿದ್ದಾರೆ. ಕಳ್ಳತನ ನಡೆದಿರುವುದು ಕುಟುಂಬಸ್ಥರು ಮನೆಗೆ ಮರಳಿದ ಬಳಿಕವೇ ಗೊತ್ತಾಗಿದೆ. ಒಳಗೆ ಪ್ರವೇಶಿಸಿದಾಗ ಅಲ್ಮಾರಿಗಳು ಅಸ್ತವ್ಯಸ್ತವಾಗಿದ್ದು, ಆಭರಣಗಳು ಮತ್ತು ನಗದು ಕಾಣೆಯಾಗಿರುವುದು



ಕಂಡುಬಂದಿದೆ.

ಇನ್ನೂ ವಿಶೇಷವಾಗಿ, ಆ ದಿನ ಇಂಡಿಯಾ–ಪಾಕಿಸ್ತಾನ ಟಿ20 ಕ್ರಿಕೆಟ್ ಪಂದ್ಯವೂ ನಡೆದಿದ್ದರಿಂದ ಬೀದಿಗಳಲ್ಲಿ ಸಹ ಜನ ಸಂಚಾರ ಕಡಿಮೆಯಿತ್ತು ಎಂದು ತಿಳಿದುಬಂದಿದೆ. ಹಬ್ಬದ ಜಾಗರಣೆ ಹಾಗೂ ಕ್ರಿಕೆಟ್ ಪಂದ್ಯ ಎರಡನ್ನೂ ಅವಕಾಶವಾಗಿ ಬಳಸಿಕೊಂಡ ಕಳ್ಳರು, ಸುತ್ತಮುತ್ತ ಯಾರೂ ಇಲ್ಲದ ಸಮಯದಲ್ಲಿ ಕೃತ್ಯ ಎಸಗಿದ್ದಾರೆ ಎನ್ನಲಾಗಿದೆ.

ಘಟನೆಯ ಮಾಹಿತಿ ತಿಳಿದ ತಕ್ಷಣ ಗೋಲಗುಂಬಜ್ ಪೊಲೀಸ್ ಠಾಣೆ ವ್ಯಾಪ್ತಿಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮನೆಯಲ್ಲಿ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ಸುಳಿವುಗಳಿಗಾಗಿ ಶೋಧ ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಬೆರಳಚ್ಚು ತಜ್ಞರು ಹಾಗೂ ಶ್ವಾನದಳ ತಂಡವನ್ನು ಕರೆಯಿಸಿ ಸಾಕ್ಷ್ಯ ಸಂಗ್ರಹಿಸಲಾಗಿದೆ.

ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಸಿಸಿ ಕ್ಯಾಮೆರಾ ದೃಶ್ಯಗಳ ಪರಿಶೀಲನೆ ಸೇರಿದಂತೆ ವಿವಿಧ ಕೋಣಗಳಿಂದ ತನಿಖೆ ಮುಂದುವರಿಸಿದ್ದಾರೆ. ಹಬ್ಬದ ಸಂದರ್ಭಗಳಲ್ಲಿ ಮನೆಗಳನ್ನು ಖಾಲಿ ಬಿಡುವವರು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಪೊಲೀಸರು ಸಾರ್ವಜನಿಕರಿಗೆ ಸಲಹೆ ನೀಡಿದ್ದಾರೆ.

ಒಟ್ಟಾರೆ, ಮಹಾಶಿವರಾತ್ರಿ ಜಾಗರಣೆಯಂತಹ ಧಾರ್ಮಿಕ ಸಂದರ್ಭವನ್ನೇ ದುರುಪಯೋಗ ಮಾಡಿಕೊಂಡು ನಡೆದ ಈ ಕಳ್ಳತನ ಸ್ಥಳೀಯರಲ್ಲಿ ಭದ್ರತಾ ಚಿಂತೆ ಹೆಚ್ಚಿಸಿದ್ದು, ಆರೋಪಿಗಳನ್ನು ಶೀಘ್ರವೇ ಬಂಧಿಸಬೇಕು ಎಂಬುದು ನಿವಾಸಿಗಳ ಒತ್ತಾಯವಾಗಿದೆ.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ:
9538786812 8217606793

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ತಾಯಿ ಬೈದಿದ್ದಕ್ಕೆ 7ನೇ ತರಗತಿ ಬಾಲಕಿ ಆತ್ಮಹತ್ಯೆ



**ಚಿಕ್ಕಮಗಳೂರು:** ತಾಯಿ ಬೈದಿದ್ದಕ್ಕೆ ಮನ ನೊಂದು ಏಳನೇ ತರಗತಿ ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿರುವ ದುರಂತ ಘಟನೆ ಚಿಕ್ಕಮಗಳೂರು ಜಿಲ್ಲೆ, ಕೊಪ್ಪ ತಾಲೂಕಿನ ಜಯಪುರ ಸಮೀಪದ ಬಸರೀಕಟ್ಟೆ ಗ್ರಾಮದಲ್ಲಿ ನಡೆದಿದೆ. ಈ ಘಟನೆ ಗ್ರಾಮದಲ್ಲಿ ಆಘಾತದ ವಾತಾವರಣ ಸೃಷ್ಟಿಸಿದೆ.

ಮೃತ ವಿದ್ಯಾರ್ಥಿನಿಯನ್ನು 13 ವರ್ಷದ ಸುಪ್ರಿತಾ ಎಂದು ಗುರುತಿಸಲಾಗಿದೆ. ಸುಪ್ರಿತಾ ಸ್ಥಳೀಯ ಶಾಲೆಯಲ್ಲಿ ಏಳನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದು, ಸಾಮಾನ್ಯವಾಗಿ ಮೌನ ಸ್ವಭಾವದ ಬಾಲಕಿಯಾಗಿದ್ದಳು ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಘಟನೆ ನಡೆದ ದಿನ ಮಧ್ಯಾಹ್ನದ ವೇಳೆ ದುರ್ಘಟನೆ ಸಂಭವಿಸಿದೆ.

ಸುಪ್ರಿತಾಳ ತಾಯಿ ಸರೋಜ ಅವರು ಬಸರಿಕಟ್ಟೆ ಗ್ರಾಮದಲ್ಲಿರುವ ಒಂದು ಮೊಬೈಲ್ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದರು. ಮಧ್ಯಾಹ್ನ ಊಟದ ಸಮಯಕ್ಕೆ ಮನೆಗೆ ಬಂದ ಅವರು ಮಗಳಿಗೆ ಊಟ ಹಾಕಿಕೊಟ್ಟಿದ್ದಾರೆ. ಆ ಸಮಯದಲ್ಲಿ ಸುಪ್ರಿತಾ ಟಿವಿ ನೋಡುತ್ತಿದ್ದಳು ಎನ್ನಲಾಗಿದೆ. ಊಟ ಮಾಡುವಾಗ ಟಿವಿ ನೋಡುತ್ತಾ ಇದ್ದಾಗ ಅಜಾಗರೂಕತೆಯಿಂದ ತಟ್ಟೆ ಕೈ ತಪ್ಪಿ ಕೆಳಗೆ ಬಿದ್ದು ಅನ್ನ ಚೆಲ್ಲಿಹೋಗಿದೆ. ಇದರಿಂದ ಸ್ವಲ್ಪ ಕೋಪಗೊಂಡ ತಾಯಿ, "ಬರೀ ಟಿವಿ ನೋಡಬೇಡ, ಓದಿಗೂ ಗಮನ ಕೊಡು. ಚೆಲ್ಲಿರುವ ಅನ್ನವನ್ನು ಕ್ಲೀನ್ ಮಾಡು" ಎಂದು ಹೇಳಿ ಮತ್ತೆ ಕೆಲಸಕ್ಕೆ ತೆರಳಿದ್ದಾರೆ.

ತಾಯಿ ಕೆಲಸಕ್ಕೆ ಹೋದ ಕೆಲವೇ ಸಮಯದಲ್ಲಿ ಮನನೊಂದು ಸುಪ್ರಿತಾ ಅತಿರೇಕದ ನಿರ್ಧಾರ ಕೈಗೊಂಡಿದ್ದಾಳೆ. ಮನೆಯೊಳಗಿದ್ದ ವೇಲ್ (ದುಪ್ಪಟ್ಟಾ) ಬಳಸಿ ಮನೆಯ ಮೇಲ್ಛಾವಣಿಗೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾಳೆ ಎಂದು ತಿಳಿದುಬಂದಿದೆ. ಕೆಲ ಸಮಯದ ಬಳಿಕ ಮನೆಗೆ ಮರಳಿದ ತಾಯಿ ಈ ದುರ್ಘಟನೆ ಕಂಡು ಬೆಚ್ಚಿಬಿದ್ದಿದ್ದಾರೆ. ತಕ್ಷಣವೇ ನೆರೆಹೊರೆಯವರ ಸಹಾಯದಿಂದ ಬಾಲಕಿಯನ್ನು ಆಸ್ಪತ್ರೆಗೆ ಕರೆದೊಯ್ದರೂ, ವೈದ್ಯರು ಆಕೆಯನ್ನು ಮೃತಳಾಗಿ ಘೋಷಿಸಿದ್ದಾರೆ.

ಕುಟುಂಬ ಹಿನ್ನೆಲೆ ಪರಿಶೀಲಿಸಿದಾಗ, ಸುಪ್ರಿತಾಳ ತಾಯಿ ಸರೋಜ ಅವರು ಗಂಡನಿಂದ ಬೇರ್ಪಟ್ಟು ಪ್ರತ್ಯೇಕವಾಗಿ ವಾಸವಿದ್ದರು ಎಂದು ತಿಳಿದುಬಂದಿದೆ. ಹಿರಿಯ ಮಗಳು ತಾಯಿಯೊಂದಿಗೆ ಇದ್ದರೆ, ಕಿರಿಯ ಮಗಳು ತಂದೆಯೊಂದಿಗೆ ವಾಸಿಸುತ್ತಿದ್ದಳು. ಕುಟುಂಬದಲ್ಲಿ ಈಗಾಗಲೇ ಕೆಲವು ವೈಯಕ್ತಿಕ ಸಂಕಷ್ಟಗಳಿದ್ದ ಹಿನ್ನೆಲೆಯಲ್ಲಿ ಈ ಘಟನೆ ಮತ್ತಷ್ಟು ನೋವನ್ನುಂಟುಮಾಡಿದೆ.

ಘಟನೆ ಸಂಬಂಧ ಜಯಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಾಥಮಿಕ ತನಿಖೆ ಮುಂದುವರಿದಿದ್ದು, ಮರಣೋತ್ತರ ಪರೀಕ್ಷೆ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿದುಬಂದಿದೆ.

ಒಟ್ಟಾರೆ, ತಾಯಿಯ ಸಾಮಾನ್ಯ ಗದರಿಕೆಗೆ ಮನನೊಂದು ಬಾಲಕಿ ಇಂತಹ ತೀವ್ರ ನಿರ್ಧಾರ ಕೈಗೊಂಡಿರುವುದು ದುಃಖಕರ ಸಂಗತಿಯಾಗಿದೆ. ಈ ಘಟನೆ ಪೋಷಕರು ಮತ್ತು ಮಕ್ಕಳ ನಡುವೆ ಸಂವಹನ ಹಾಗೂ ಮಾನಸಿಕ ಆರೋಗ್ಯದ ಮಹತ್ವವನ್ನು ಮತ್ತೊಮ್ಮೆ ಮನನಪಡಿಸಿದೆ.

## ಬಿಎಂಟಿಸಿ ಬಸ್ ಡಿಕ್ಕಿ–ಬೈಕ್ ಸವಾರ ಸಾವು



**ಬೆಂಗಳೂರು:** ಬೆಂಗಳೂರು ಮಹಾ ನಗರ ಸಾರಿಗೆ ಸಂಸ್ಥೆಗೆ ಸೇರಿದ ಬಸ್ ಡಿಕ್ಕಿಯಾಗಿ ಬೈಕ್ ಸವಾರ ಸಾವನ್ನಪ್ಪಿದ ದುರ್ಘಟನೆ ತುಮಕೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಭವಿಸಿದೆ. ಈ ಅಪಘಾತದಿಂದ ಸ್ಥಳೀಯರಲ್ಲಿ ಆತಂಕ ಮೂಡಿದ್ದು, ಕೆಲ ಸಮಯ ಸಂಚಾರ ವ್ಯತ್ಯಯ ಉಂಟಾಯಿತು.

ಅಪಘಾತವು ನೆಲಮಂಗಲ ತಾಲೂಕಿನ ಕೆಂಗಲ್ ಕೆಂಪೋಹಳ್ಳಿ ಗೇಟ್ ಸಮೀಪ ನಡೆದಿದೆ. ಮೂಲಗಳ ಪ್ರಕಾರ, ವೇಗವಾಗಿ ಸಂಚರಿಸುತ್ತಿದ್ದ ಬಿಎಂಟಿಸಿ ಬಸ್ ಮುಂದೆ ಸಾಗುತ್ತಿದ್ದ ಬೈಕ್‌ಗೆ ಹಿಂಬದಿಯಿಂದ ಡಿಕ್ಕಿ ಹೊಡೆದಿದೆ ಎಂದು ತಿಳಿದುಬಂದಿದೆ. ಡಿಕ್ಕಿಯ ತೀವ್ರತೆಗೆ ಬೈಕ್ ರಸ್ತೆಗೆ ಎಸೆಯಲ್ಪಟ್ಟಿದ್ದು, ಸವಾರರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಬೈಕ್ ಸವಾರರಲ್ಲಿ ಒಬ್ಬರು ಘಟನೆ ನಡೆದ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮತ್ತೊಬ್ಬ ಸವಾರನಿಗೆ ತೀವ್ರ ಗಾಯಗಳಾಗಿದ್ದು, ಅವನ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ. ಸ್ಥಳೀಯರು ತಕ್ಷಣವೇ ನೆರವಿಗೆ ಧಾವಿಸಿ ಗಾಯಾಳುವನ್ನು ರಕ್ಷಿಸಲು ಪ್ರಯತ್ನಿಸಿದ್ದಾರೆ.

ಗಂಭೀರವಾಗಿ ಗಾಯಗೊಂಡ ಸವಾರನನ್ನು ಅಂಬುಲೆನ್ಸ್ ಮೂಲಕ ಸಮೀಪದ ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ವೈದ್ಯರು ಅವನಿಗೆ ತುರ್ತು ಚಿಕಿತ್ಸೆ ನೀಡುತ್ತಿದ್ದಾರೆ. ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆಯೇ ಸಂಚಾರಿ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಪಘಾತದ ನಿಖರ ಕಾರಣವನ್ನು ತಿಳಿದುಕೊಳ್ಳಲು ತನಿಖೆ ಆರಂಭಿಸಲಾಗಿದೆ.

ಅಪಘಾತದ ಪರಿಣಾಮ ಕೆಲಕಾಲ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ದಟ್ಟಣೆ ಉಂಟಾಯಿತು. ಬಳಿಕ ಪೊಲೀಸರು ವಾಹನ ಸಂಚಾರವನ್ನು ನಿಯಂತ್ರಿಸಿ ಸುಗಮಗೊಳಿಸಿದರು. ವೇಗದ ಚಾಲನೆ ಹಾಗೂ ನಿರ್ಲಕ್ಷ್ಯ ಚಾಲನೆ ಅಪಘಾತಕ್ಕೆ ಕಾರಣವಾಗಿರಬಹುದೆಂಬ ಅನುಮಾನ ವ್ಯಕ್ತವಾಗಿದ್ದು, ಸಂಬಂಧಿಸಿದವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಪೊಲೀಸರು ತಿಳಿಸಿದ್ದಾರೆ.

ಒಟ್ಟಾರೆ, ತುಮಕೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದ ಈ ಭೀಕರ ಅಪಘಾತ ಮತ್ತೊಮ್ಮೆ ರಸ್ತೆ ಸುರಕ್ಷತೆ ಕುರಿತು ಪ್ರಶ್ನೆಗಳನ್ನು ಎಬ್ಬಿಸಿದೆ.

## ಹೊಸಹೊಳಲು ಗ್ರಾಮದಲ್ಲಿ ವೈಭವದ ಮಹಾಶಿವರಾತ್ರಿ ಆಚರಣೆ: ವಿಶೇಷ ಪೂಜೆ ಹಾಗೂ ಅನ್ನಸಂತರ್ಪಣೆ



**ಕೃಷ್ಣರಾಜಪೇಟೆ :** ತಾಲೂಕಿನ ಹೊಸ ಹೊಳಲು ಗ್ರಾಮದ ಪುಣ್ಯಕ್ಷೇತ್ರವಾದ ಶ್ರೀ ಗುರು ಕರಿಬಸವೇಶ್ವರ ಅಜ್ಜಪ್ಪ ಸ್ವಾಮಿ ದೇವಸ್ಥಾನದಲ್ಲಿ ಮಹಾಶಿವರಾತ್ರಿ ಪ್ರಯುಕ್ತ ಭಾನುವಾರ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು ಅತ್ಯಂತ ಭಕ್ತಿ ಭಾವದಿಂದ ಜರುಗಿದವು,

ದೇವಸ್ಥಾನದ ಅರ್ಚಕರಾದ ಸುರೇಶ್ ಅಜ್ಜಪ್ಪ ರವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಸ್ವಾಮಿಗೆ ಬೆಳಗಿನ ಜಾವದಿಂದಲೇ ವಿಶೇಷ ಅಭಿಷೇಕ, ರುದ್ರಾಭಿಷೇಕ ಹಾಗೂ ಹೋಮ–ಹವನಗಳನ್ನು ನೆರವೇರಿಸಲಾಯಿತು. ದೇವಸ್ಥಾನವನ್ನು ಹೂವು ಮತ್ತು ತಳಿರು ತೋರಣಗಳಿಂದ ಅಲಂಕರಿಸಲಾಗಿದ್ದು, ಭಕ್ತಾದಿಗಳಿಗೆ ಆಧ್ಯಾತ್ಮಿಕ ವಾತಾವರಣ ನಿರ್ಮಿಸಲಾಗಿತ್ತು,

ಈ ಸಂದರ್ಭದಲ್ಲಿ ಮಾತನಾಡಿದ ಅರ್ಚಕ ಸುರೇಶ್ ಅಜ್ಜಪ್ಪ ರವರು ಮಹಾಶಿವರಾತ್ರಿಯ ಪುಣ್ಯದಿನದಂದು ಭಕ್ತರ ಸಹಕಾರದೊಂದಿಗೆ ಅಜ್ಜಪ್ಪನಿಗೆ ವಿಶೇಷ ಪೂಜೆಗಳನ್ನು ಸಲ್ಲಿಸಲಾಗಿದೆ, ಗ್ರಾಮಸ್ಥರು ಹಿತೈಷಿಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸ್ವಾಮಿಯ ಕೃಪೆಗೆ ಪಾತ್ರರಾಗಿದ್ದಾರೆ, ಗುರುಗಳ ಆಶೀರ್ವಾದ ಎಲ್ಲರ ಮೇಲಿರಲಿ ಎಂದು ಹಾರೈಸಿದರು,

ಹೊಸಹೊಳಲು ಗ್ರಾಮ ಮಾತ್ರವಲ್ಲದೆ ನೆರೆಹೊರೆಯ ಹಳ್ಳಿಗಳಿಂದ ನೂರಾರು ಭಕ್ತರು ಆಗಮಿಸಿ ಸ್ವಾಮಿಯವರ ದರ್ಶನ ಪಡೆದ ಎಲ್ಲಾ ಭಕ್ತಾದಿಗಳಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು,

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರು, ಯಜಮಾನರು ಹಾಗೂ ಸದ್ಭಕ್ತರು ಉಪಸ್ಥಿತರಿದ್ದು ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದರು,

## ರಾತ್ರಿ ಜಾಗರಣೆ, ಪೂಜೆಗಳೊಂದಿಗೆ ಶಿವರಾತ್ರಿ ಆಚರಣೆ



**ಪೀಣ್ಯ ದಾಸರಹಳ್ಳಿ:** ಸಮೀಪದ ಚಿಕ್ಕಬಾಣಾವರದ ಶ್ರೀ ವೀರಶೈವ ಲಿಂಗಾಯತ ವೇದಿಕೆ ಚಿಕ್ಕಬಾಣಾವರ ವತಿಯಿಂದ ಶಿವರಾತ್ರಿ ಹಬ್ಬ ಆಚರಿಸಲಾಯಿತು.

ಭಕ್ತಾದಿಗಳಿಗೆ ಹಣ್ಣು, ಪ್ರಸಾದ ನೀಡಲಾಯಿತು.

ವೇದಿಕೆಯ ಅಧ್ಯಕ್ಷ ಎಂ.ಎಚ್. ಪಾಟೀಲ್ ಮಾತನಾಡಿ,' ಶಿವರಾತ್ರಿ ಹಬ್ಬವು ಎಲ್ಲಾ ಕಡೆ ವಿಜೃಂಭಣೆಯಿಂದ ನಡೆಯುತ್ತಿದೆ.ಶಿವನಿಗೆ ಅದ್ದೂರಿ ಅಲಂಕಾರಕ್ಕಿಂತ ಭಕ್ತಿಯಿಂದ ಅರ್ಪಿಸುವ ಒಂದು ಬಿಲ್ವಪತ್ರೆ ಹಾಗೂ ಅಭಿಷೇಕ ಎಂದರೆ ಬಹಳ ಪ್ರೀತಿ. ಹಾಗೆಯೇ ಶಿವನು ಹಾಲಾಹಲವನ್ನು ಕುಡಿದು ಲೋಕವನ್ನು ರಕ್ಷಿಸಿದಂತೆ ನಾವು ಕೂಡ ನಮ್ಮೊಳಗಿನ ಕೆಟ್ಟ ಆಲೋಚನೆಗಳನ್ನು ತ್ಯಜಿಸಿ ಸನ್ಮಾರ್ಗದಲ್ಲಿ ನಡೆಯಬೇಕೆಂಬುದೇ ಈ ಹಬ್ಬದ ಸಂದೇಶ'ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ ಸಂಗನಬಸಪ್ಪ ಬಿರಾದಾರ್, ಎಂಬಿ ದಯಾನಂದ್, ರಾಜೇಂದ್ರ ಕೊಣ್ಣೂರ, ಮಲ್ಲಿಕಾರ್ಜುನ ಸ್ವಾಮಿ, ಬಿರಾದಾರ್, ಶಾಂತ ಬಿರಾದಾರ್, ಪುಷ್ಪರಾಜ್, ವೀರಭದ್ರ ಆಳಕ್ಕಿ ಆಲೂರು, ಸುರೇಶ ದೊಡ್ಡಮನಿ, ಸವಿತಾ, ಪರಮೇಶಿ, ವಿರುಪಾಕ್ಷ ಹಟ್ಟಿ ಮುಂತಾದವರಿದ್ದರು.

## 50% ಆಫರ್ ಘೋಷಣೆಯೊಂದಿಗೆ ಚಿಕ್ಕಸಂದ್ರ ರಸ್ತೆಯಲ್ಲಿ ಹೊಸ ಸಲೂನ್ ಆರಂಭ



**ಪೀಣ್ಯ ದಾಸರಹಳ್ಳಿ:** ಸಪ್ತಗಿರಿ ಕಾಲೇಜ್ ಪಕ್ಕ ಚಿಕ್ಕಸಂದ್ರ ರಸ್ತೆಯಲ್ಲಿ ಸಲೋನಿಕ್ ಸಲೂನ್ 50% ಆಫರ್ ನಲ್ಲಿ ನೂತನ ಸಲೂನ್ ಅನ್ನು ಶಾಸಕ ಎಸ್. ಮುನಿರಾಜು ಉದ್ಘಾಟಿಸಿದರು.

ಉದ್ಘಾಟನಾ ಆಫರ್ ನೀಡಲಾಗುತ್ತಿದ್ದು ನೂತನವಾಗಿ ನಮ್ಮ ಸಲೋನಿಕ್ ಸಲೂನ್ ನಲ್ಲಿ ಪುರುಷ ಮತ್ತು ಮಹಿಳೆಯರು ಮತ್ತು ಮಕ್ಕಳಿಗೆ ನುರಿತ ಅನುಭವಿಗಳಿಂದ ಹೇರ್ ಕಟ್ ಶೇವಿಂಗ್, ಕೂದಲಿಗೆ ಬಣ್ಣ, ಹೆಡ್ ಮಸಾಜ್, ಫೇಶಿಯಲ್ ಹಾಗೆಯೇ ಹೆಣ್ಣು ಮಕ್ಕಳಿಗೂ ಕೂಡ ಸುಂದರವಾಗಿ ಕಾಣಲು ವಿವಿಧ ಬಗೆಯ ಪ್ಯಾಕೇಜ್ ಗಳು ನಮ್ಮಲ್ಲಿದೆ. ಈಗ ಅತಿ ಕಡಿಮೆ 50% ನಲ್ಲಿ ಮಾಡಲಾಗುತ್ತದೆ' ಎಂದು ಮಾಲೀಕರು ತಿಳಿಸಿದರು.

ಈ ಸಂದರ್ಭದಲ್ಲಿ ಸಂದೀಪ್ ಸಿಂಗ್, ಸಜಿನ್, ಫೌಜಿಯಾ, ಶಫೀನ್, ವಿನೋದ್, ಪ್ರದೀನ್ ಮತ್ತು ಸೋಫಿಯಾ ಇದ್ದರು.

## ಜೀವನ ಪರ್ಯಾಂತ ನೀಡುವ ಜಾತಿ ಪ್ರಮಾಣ ಪತ್ರವನ್ನು ರದ್ದುಗೊಳಿಸುವುದು ಖಂಡನೀಯ –ಪವನ್ ಕುಮಾರ್ ಶಿರ್ವ

**ಉಡುಪಿ ಮತ್ತು ದಕ್ಷಿಣ ಕನ್ನಡ :** ಜಿಲ್ಲೆಯಲ್ಲಿ ಜಾತಿ ಪ್ರಮಾಣವನ್ನು ಇಲಾಖೆ ಅವರು ಒಮ್ಮೆ ನೀಡಿದರೇ ಅದು ಜೀವನ ಪರ್ಯಂತ ವಾಗಿರುತ್ತದೆ.. ಆದರೆ ಈಗ ಮೊದಲು ಜಾತಿ ಪ್ರಮಾಣ ಕೊಟ್ಟಿದ್ದರೂ ಈಗ ಯಾವುದಾದರೂ ಬೇರೆ ದಾಖಲೆ ಮಾಡಲು ಹೋದರೆ ಆ ದಾಖಲೆಯನ್ನು ರದ್ದುಗೊಳಿಸಿ ನಾವು ನೀಡದ ಜಾತಿಯನ್ನು ಅವರು ನೋಂದಾವಣಿ ಮಾಡುತ್ತಾರೆ.. ಇದು ಎಷ್ಟುರ ಮಟ್ಟಿಗೆ ಸರಿ ಎಂದು ಭೋವಿ ಮುಖಂಡ ಪವನ್ ಕುಮಾರ್ ಶಿರ್ವ ಆಕ್ರೋಶ ವ್ಯಕ್ತ ಪಡಿಸಿದ್ದಾರೆ.. ನೀವು ಜಾತಿ ಪ್ರಮಾಣ ಪತ್ರ ನೀಡುವಾಗ ಅವರ ಕುಲಕಸುಬು ನೋಡಿ. ಯಾಕೆಂದರೆ ಅವರ ವಂಶ ಪಾರಂಪರಿಕವಾಗಿ ಅವರ ಕುಲಕಸುಬು



ಕಲ್ಲಿನ ಕೆಲಸ, ಶಿಲ್ಪಿ ಕೆಲಸ ವಾಗಿರುತ್ತದೆ... ನೀವು ಮುಂಚೆ ನೀಡಿದವರಿಗೂ ಕೂಡ ಈಗ ರದ್ದು ಮಾಡುವುದು ಖಂಡನೀಯ.. ಇದೇ ರೀತಿ ಮುಂದೆಯೂ ಆದರೂ ರಾಜ್ಯ ಮಟ್ಟದಲ್ಲಿ ಪ್ರತಿಭಟನೆ ಮಾಡಲಾಗುವುದು ಎಂದು ಭೋವಿ ಮುಖಂಡ ಪವನ್ ಕುಮಾರ್ ಶಿರ್ವ ಆಕ್ರೋಶ ವ್ಯಕ್ತ ಪಡಿಸಿದ್ದಾರೆ..

## ಹರ್ ಘರ್ ಜಲ್ ಯೋಜನೆ ಹಳ್ಳ ಹಿಡಿಸಿದ ಅಧಿಕಾರಿಗಳು



**ಹಾವೇರಿ:** ಗ್ರಾಮೀಣ ಭಾಗದ ಜನರಿಗೆ ಶುದ್ಧ ಕುಡಿಯುವ ನೀರನ್ನು ಮನೆಮನೆಗೆ ತಲುಪಿಸುವ ಮಹತ್ವಾಕಾಂಕ್ಷಿ ಉದ್ದೇಶದಿಂದ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಜಲ ಜೀವನ್ ಮಿಷನ್ (ಹರ್ ಘರ್ ಜಲ್ ಯೋಜನೆ) ಹಲವು ಕಡೆಗಳಲ್ಲಿ ಫಲಾನುಭವಿಗಳಿಗೆ ತಲುಪದೆ ಇರುವ ಆರೋಪಗಳು ಕೇಳಿಬರುತ್ತಿವೆ. ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ಕೈಗೊಂಡ ಯೋಜನೆಗಳು ನೆಲಮಟ್ಟದಲ್ಲಿ ನಿರೀಕ್ಷಿತ ಫಲಿತಾಂಶ ನೀಡದೆ, ಸಾರ್ವಜನಿಕರು ಸಂಕಷ್ಟ ಅನುಭವಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ಹಾವೇರಿ ಜಿಲ್ಲೆಯ ರಟ್ಟಿಹಳ್ಳಿ ತಾಲ್ಲೂಕಿನ ನೆಶ್ವಿ ಗ್ರಾಮದಲ್ಲೂ ಇದೇ ರೀತಿಯ ಪರಿಸ್ಥಿತಿ ಎದುರಾಗಿದೆ. ಗ್ರಾಮದಲ್ಲಿ ಸುಮಾರು 50 ಲಕ್ಷ ರೂ. ವೆಚ್ಚದಲ್ಲಿ ಮನೆಮನೆಗೆ ಗಂಗೆ ಯೋಜನೆಯಡಿ ಪೈಪ್‌ಲೈನ್ ವ್ಯವಸ್ಥೆ ಅಳವಡಿಸಲಾಗಿದೆ. ಗ್ರಾಮದ 600ಕ್ಕೂ ಅಧಿಕ ಮನೆಗಳಿಗೆ ಜಲ ಜೀವನ್ ಮಿಷನ್‌ನಡಿ ನಳಗಳನ್ನು ಅಳವಡಿಸಲಾಗಿದ್ದು, ಯೋಜನೆ ಪೂರ್ಣಗೊಂಡಿದೆ ಎಂದು ದಾಖಲೆಗಳಲ್ಲಿ ಉಲ್ಲೇಖಿಸಲಾಗಿದೆ. ಆದರೆ ವಾಸ್ತವದಲ್ಲಿ ಮನೆಗಳಿಗೆ ನೀರು ಸರಬರಾಜಾಗುತ್ತಿಲ್ಲ ಎಂದು ಗ್ರಾಮಸ್ಥರು ಆರೋಪಿಸುತ್ತಿದ್ದಾರೆ.

ಗ್ರಾಮದ ಜನರ ಪ್ರಕಾರ, ಕಾಮಗಾರಿ ಪೂರ್ಣಗೊಂಡು ಐದು ವರ್ಷಗಳಾದರೂ ನಳಗಳಲ್ಲಿ ನೀರು ಹರಿದಿಲ್ಲ. ಪರಿಣಾಮವಾಗಿ 50 ರಿಂದ 100 ಕುಟುಂಬಗಳು ಒಂದೇ ಸಾರ್ವಜನಿಕ ನಳದ ಮೇಲೆ ಅವಲಂಬಿಸಬೇಕಾದ ಪರಿಸ್ಥಿತಿ ಉಂಟಾಗಿದೆ. ಪ್ರತಿದಿನ ಗಂಟೆಗಳ ಕಾಲ ಸಾಲಿನಲ್ಲಿ ನಿಂತು ನೀರು ತುಂಬಿಕೊಳ್ಳಬೇಕಾಗುತ್ತಿದ್ದು, ಮಹಿಳೆಯರು ಮತ್ತು ಹಿರಿಯರು ಹೆಚ್ಚು ತೊಂದರೆ ಅನುಭವಿಸುತ್ತಿದ್ದಾರೆ. ಮನೆಗಳಿಗೆ ಅಳವಡಿಸಿದ ನಳಗಳು ಬಳಕೆಯಾಗದೆ ತುಕ್ಕು ಹಿಡಿದು ಹಾಳಾಗುತ್ತಿವೆ.

ಗ್ರಾಮ ಪಂಚಾಯಿತಿಯಿಂದ ಕಾಮಗಾರಿ ಪೂರ್ಣಗೊಂಡಿದೆ ಎಂಬ ಕಾರಣಕ್ಕೆ ಎನ್‌ಒಸಿ ನೀಡಲಾಗಿದೆ ಎಂದು ತಿಳಿದುಬಂದಿದೆ. ಆದರೆ ನೀರು ಸರಬರಾಜೇ ಆಗದಿದ್ದರೆ ಎನ್‌ಒಸಿ ಹೇಗೆ ನೀಡಲಾಯಿತು ಎಂಬ ಪ್ರಶ್ನೆಯನ್ನು ಗ್ರಾಮಸ್ಥರು ಎತ್ತಿದ್ದಾರೆ. ಕೆಲವು ಜನಪ್ರತಿನಿಧಿಗಳ ಮನೆಗಳ ಮುಂದೆ ಮಾತ್ರ ನಳಗಳಿದ್ದು, ಸಾಮಾನ್ಯ ಜನರು ಮಾತ್ರ ಸಾರ್ವಜನಿಕ ನಳಕ್ಕೆ ಅವಲಂಬಿಸಬೇಕಾದ ಸ್ಥಿತಿ ಇದೆ ಎಂಬ ಆಕ್ರೋಶವೂ ವ್ಯಕ್ತವಾಗಿದೆ.

ಸ್ಥಳೀಯ ನಿವಾಸಿ ಚನ್ನಬಸಪ್ಪ ಅವರು ಮಾತನಾಡಿ, ಗುತ್ತಿಗೆದಾರರು ತಮ್ಮ ಕೆಲಸ ಮುಗಿದಿದೆ ಎಂದು ಕೈಕಳೆದುಕೊಳ್ಳುತ್ತಿದ್ದಾರೆ. ಅಧಿಕಾರಿಗಳು ಇಂದು–ನಾಳೆ ಎಂದು ಹೇಳುತ್ತ ಜನರನ್ನು ಓಡಿಸುತ್ತಿದ್ದಾರೆ. ಗುತ್ತಿಗೆದಾರ, ಪಿಡಿಓ ಮತ್ತು ಕೆಲ ಗ್ರಾಮ ಪಂಚಾಯಿತಿ ಸದಸ್ಯರ ಹೊಂದಾಣಿಕೆಯಿಂದ ನೀರು ಸರಬರಾಜು ಪ್ರಾರಂಭವಾಗಿಲ್ಲ ಎಂದು ಗಂಭೀರ ಆರೋಪ ಮಾಡಿದ್ದಾರೆ. ಸರ್ಕಾರದ ಕೋಟ್ಯಂತರ ರೂಪಾಯಿ ಹಣ ವ್ಯರ್ಥವಾಗಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಒಟ್ಟಿನಲ್ಲಿ, ಗ್ರಾಮೀಣ ಜನತೆಗೆ ಶುದ್ಧ ಕುಡಿಯುವ ನೀರು ಮನೆಮನೆಗೂ ತಲುಪಬೇಕು ಎಂಬ ಉದ್ದೇಶದಿಂದ ಜಾರಿಗೊಂಡ ಯೋಜನೆ, ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಕಾರ್ಯನಿರ್ವಹಣೆಯ ದೌರ್ಬಲ್ಯದಿಂದ ಫಲಪ್ರದವಾಗದೆ ಇರುವುದಾಗಿ ಗ್ರಾಮಸ್ಥರು ದೂರಿದ್ದಾರೆ. ಸಂಬಂಧಿತ ಅಧಿಕಾರಿಗಳು ತಕ್ಷಣ ಎಚ್ಚತ್ತುಕೊಂಡು ಸಮಸ್ಯೆ ಪರಿಹರಿಸಬೇಕು, ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಹಾಗೂ ಮನೆಮನೆಗೂ ನೀರು ಸರಬರಾಜು ಮಾಡುವಂತೆ ಕ್ರಮ ಕೈಗೊಳ್ಳಬೇಕು ಎಂಬುದು ಸ್ಥಳೀಯರ ಒತ್ತಾಯವಾಗಿದೆ.

## ವಿಮಾನ ನಿಲ್ದಾಣದಲ್ಲಿ ಮಹಿಳಾ ಪ್ರಯಾಣಿಕರ ಮೇಲೆ ನಾಯಿ ದಾಳಿ

**ಜೈಪುರ:**ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ 2ರಲ್ಲಿ ಭಯಾನಕ ಘಟನೆ ಸಂಭವಿಸಿದೆ. ದೆಹಲಿಯಿಂದ ವಿಮಾನ ಮೂಲಕ ಆಗಮಿಸಿದ್ದ ಮಹಿಳಾ ಪ್ರಯಾಣಿಕರೊಬ್ಬರ ಮೇಲೆ ಹಠಾತ್‌ನೇ ನಾಯಿಯೊಂದು ದಾಳಿ ನಡೆಸಿದ್ದು, ಪರಿಣಾಮವಾಗಿ ಆಕೆಗೆ ಗಂಭೀರ ಗಾಯಗಳಾಗಿವೆ. ಈ ಘಟನೆ ವಿಮಾನ ನಿಲ್ದಾಣದ ಭದ್ರತಾ ವ್ಯವಸ್ಥೆ ಮತ್ತು ಸಾರ್ವಜನಿಕರ ಸುರಕ್ಷತೆಗೆ ಸಂಬಂಧಿಸಿದಂತೆ ವಿಚಾರಣೆಗೆ ಕಾರಣವಾಗಿದೆ.

ಮೂಲಗಳ ಪ್ರಕಾರ, ಈ ಘಟನೆ ಭಾನುವಾರ ಮಧ್ಯಾಹ್ನ ಸುಮಾರು 2:20 ಗಂಟೆಗಷ್ಟೆ ಸಂಭವಿಸಿದೆ. ಮಹಿಳೆಯು ವಿಮಾನದಿಂದ ಇಳಿದ ನಂತರ ಟರ್ಮಿನಲ್‌ನಿಂದ ಹೊರಬರುತ್ತಿದ್ದಾಗ, ಗೇಟ್‌ನ ಹೊರಭಾಗದಲ್ಲಿ ಹೊರಗೆ ಓಡಾಡುತ್ತಿದ್ದ ನಾಯಿಯೊಂದು ಆಕೆಯ ಮೇಲೆ ಅಕ್ರಮವಾಗಿ ದಾಳಿ ನಡೆಸಿತು. ನೇರ ದಾಳಿಯಿಂದ ಆಕೆಯ ಕಾಲಿಗೆ ಆಳವಾದ ಗಾಯ ಸಂಭವಿಸಿ ರಕ್ತಸ್ರಾವ ಆರಂಭವಾಯಿತು. ನೋವಿನಿಂದ ಆಕೆಯ ಕಿರುಚಾಟವು ಸ್ಥಳದಲ್ಲಿ ಇರುವ ಇತರ ಪ್ರಯಾಣಿಕರು ಮತ್ತು ವಿಮಾನ ನಿಲ್ದಾಣ ಸಿಬ್ಬಂದಿಯ ಗಮನ ಸೆಳೆದಿತು. ತಕ್ಷಣವೇ ಅತಿಥಿಗಳು ಮತ್ತು ಸಿಬ್ಬಂದಿ ಆಕೆಯನ್ನು ಸುರಕ್ಷಿತ ಸ್ಥಳಕ್ಕೆ ಕರೆದೊಯ್ದು ಮೊದಲಿನ ಪ್ರಾಥಮಿಕ ನೆರವು ಒದಗಿಸಿದರು.

ವಿಮಾನ ನಿಲ್ದಾಣದ ಸಿಬ್ಬಂದಿಯು ತಕ್ಷಣವೇ ಪ್ರಾಥಮಿಕ ವೈದ್ಯಕೀಯ ಚಿಕಿತ್ಸೆ ನೀಡಿದ ಬಳಿಕ, ಆಕೆಯನ್ನು ಸಮೀಪದ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ವೈದ್ಯರು ಅಗತ್ಯ ಚಿಕಿತ್ಸೆ ನೀಡಿದರು. ಚಿಕಿತ್ಸೆ ಬಳಿಕ ಆಕೆಯನ್ನು ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿದೆ. ಘಟನೆ ಸಂಭವಿಸಿದ ಸ್ಥಳದಲ್ಲಿದ್ದ ಪ್ರಯಾಣಿಕರಲ್ಲಿ ಭಯ ಮತ್ತು ಆತಂಕ ಮೂಡಿದ್ದು, ವಿಮಾನ ನಿಲ್ದಾಣದ ಸಾರ್ವಜನಿಕರಿಗೆ ಸುರಕ್ಷತೆ ಸಂಬಂಧಿ ಪ್ರಶ್ನೆಗಳನ್ನು ಎದ್ದಿದೆ.

ವಿಮಾನ ನಿಲ್ದಾಣ ಅಧಿಕಾರಿಗಳು ಜೈಪುರ ಮುನ್ಸಿಪಲ್ ಕಾರ್ಪೊರೇಶನ್ ಮೂಲಕ ಆ ನಾಯಿ ಲಸಿಕೆ ಮತ್ತು ಸ್ಟೆರಿಲೈಸೇಶನ್ ಮೂಲಕ ನಿಯಂತ್ರಣದಲ್ಲಿ ಇಡಲಾಗಿದೆ ಎಂದು ತಿಳಿಸಿದ್ದಾರೆ. ಈ ಕಾರಣದಿಂದ ರೇಬೀಸ್ ಅಥವಾ ಇತರ ಸೋಂಕು ಹರಡುವ ಸಾಧ್ಯತೆ ಕಡಿಮೆ ಎನ್ನಲಾಗಿದೆ. ಆದರೂ, ಭವಿಷ್ಯದಲ್ಲಿ ಇಂತಹ ಅನಾಹುತಗಳನ್ನು ತಡೆಯಲು ವಿಮಾನ ನಿಲ್ದಾಣದಲ್ಲಿ ಫೆನ್ಸಿಂಗ್ ವ್ಯವಸ್ಥೆ ಮತ್ತು ಭದ್ರತಾ ಕ್ರಮಗಳನ್ನು ಬಲಪಡಿಸಲಾಗುವುದು ಎಂದು ಆಡಳಿತವು ಘೋಷಿಸಿದೆ.

ಈ ಘಟನೆಯು ವಿಮಾನ ನಿಲ್ದಾಣದಲ್ಲಿ ಆವಾರಾ ನಾಯಿಗಳ ಸಮಸ್ಯೆ ಮತ್ತು ಸುರಕ್ಷತಾ ಕೊರತೆಯನ್ನು ಮತ್ತೊಮ್ಮೆ ಗಮನಕ್ಕೆ ತಂದುಕೊಟ್ಟಿದೆ. ಸಾರ್ವಜನಿಕರ ಸುರಕ್ಷತೆ, ವಿಶೇಷವಾಗಿ ಮಹಿಳಾ ಪ್ರಯಾಣಿಕರ ಭದ್ರತೆ, ವಿಮಾನ ನಿಲ್ದಾಣದಲ್ಲಿ ಪ್ರಮುಖ ಆದ್ಯತೆ ಹೊಂದಬೇಕು ಎಂಬ ಒತ್ತಡವು ಹೆಚ್ಚಾಗಿದೆ. ಪ್ರವಾಸಿಗರು ಹಾಗೂ ಹವಾನಿಲದ ಸಿಬ್ಬಂದಿ ಸುರಕ್ಷಿತ ವಾತಾವರಣದಲ್ಲಿ ಪ್ರಯಾಣಿಸಬಹುದಾದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳುವ ಅಗತ್ಯವಿದೆ ಎಂಬ ನಿಟ್ಟಿನಲ್ಲಿ ವಿಮಾನ ನಿಲ್ದಾಣ ಆಡಳಿತ ತನ್ನ ಭದ್ರತಾ ಕ್ರಮಗಳನ್ನು ಪುನಃ ಪರಿಶೀಲಿಸುವುದಾಗಿ ತಿಳಿಸಿದ್ದಾರೆ.

ಒಟ್ಟಾರೆ, ಟರ್ಮಿನಲ್ 2ನಲ್ಲಿ ನಡೆದ ಈ ದುರಂತ ಘಟನೆ ವಿಮಾನ ನಿಲ್ದಾಣದ ಭದ್ರತಾ ವ್ಯವಸ್ಥೆ ಬಗ್ಗೆ ಜಾಗೃತಿಯ ಅಗತ್ಯವನ್ನು ಎತ್ತಿ ಹಿಡಿದಿದ್ದು, ಸ್ಥಳೀಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಪ್ರಯಾಣಿಕರ ಸುರಕ್ಷತೆಯ ಮೇಲೆ ಗಮನ ಹರಿಸಲು ಸಹಾಯಕವಾಗಿದೆ.

## ಈಶಾ ಫೌಂಡೇಶನ್‌ನಲ್ಲಿ ಶಿವರಾತ್ರಿ ಸಂಭ್ರಮದ ನಡುವೆ ಬೆಂಕಿ ಅವಘಡ



**ಚಿಕ್ಕಬಳ್ಳಾಪುರ:** ಜಿಲ್ಲೆಯ ಅವಲಗುರ್ಕಿ ಗ್ರಾಮದ ಸಮೀಪವಿರುವ ಈಶಾ ಫೌಂಡೇಶನ್‌ನಲ್ಲಿ ಮಹಾಶಿವರಾತ್ರಿಯ ಸಂಭ್ರಮದ ನಡುವೆಯೇ ಬೆಂಕಿ ಆಕಸ್ಮಿಕ ಸಂಭವಿಸಿದ್ದು, ಭಕ್ತರಲ್ಲಿ ಆತಂಕ ಮೂಡಿಸಿದೆ. 112 ಅಡಿಯ ಆದಿಯೋಗಿ ದರ್ಶನ ಪಡೆಯಲು ಲಕ್ಷಾಂತರ ಜನ ಜಮಾಯಿಸಿರುವ ಹೊತ್ತಲ್ಲೇ ಈ ಘಟನೆ ನಡೆದಿದ್ದು ಭಕ್ತರಲ್ಲಿ ಆತಂಕ ಮೂಡಿಸಿದೆ. ಈಶಾ ಫೌಂಡೇಶನ್‌ನ ನಾಗಮಂಟಪದ ಮುಂಭಾಗದಲ್ಲಿರುವ ಬೆಟ್ಟದ ಅರಣ್ಯ ಪ್ರದೇಶದಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಕ್ಷಣಾರ್ಧದಲ್ಲಿ ಬೆಂಕಿ ವ್ಯಾಪಿಸಿದ್ದು, ಸುತ್ತಮುತ್ತಲಿನ ಪ್ರದೇಶ ಹೊಗೆಯಿಂದ ಆವೃತವಾಗಿದೆ. ಯಾರೋ ದುಷ್ಕರ್ಮಿಗಳು ಅರಣ್ಯಕ್ಕೆ ಬೆಂಕಿ ಹಚ್ಚಿರುವ ಶಂಕೆ ವ್ಯಕ್ತವಾಗಿದೆ. ಈಗಾಗಲೇ ಈ ಪ್ರದೇಶದಲ್ಲಿ ಲಕ್ಷಾಂತರ ಜನರು ನೆರೆದಿರುವುದರಿಂದ ಪರಿಸ್ಥಿತಿ ಗಂಭೀರವಾಗಿದೆ. ತಕ್ಷಣ ಕಾರ್ಯಪ್ರವೃತ್ತರಾದ ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸರು, ಅಗ್ನಿಶಾಮಕ ದಳ ಮತ್ತು ಅರಣ್ಯ ಇಲಾಖೆ ಸಿಬ್ಬಂದಿಯನ್ನು ಸ್ಥಳಕ್ಕೆ ಕರೆಯಿಸಿ ಬೆಂಕಿ ನಂದಿಸುವ ಕಾರ್ಯಕ್ಕೆ ಮುಂದಾಗಿದ್ದಾರೆ. ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ ಲಕ್ಷಾಂತರ ಭಕ್ತರು ಆದಿಯೋಗಿ ದರ್ಶನಕ್ಕೆ ಹರಿದು ಬಂದಿದ್ದಾರೆ. ಇದರಿಂದ ಚಿಕ್ಕಬಳ್ಳಾಪುರದಾದ್ಯಂತ ಟ್ರಾಫಿಕ್ ಜಾಮ್ ಉಂಟಾಗಿದೆ.

ಬಸ್ ನಿಲ್ದಾಣಗಳಲ್ಲಿ ಕಿಲೋಮೀಟರ್‌ಗಟ್ಟಲೆ ಉದ್ದದ ಸಾಲು ಕಂಡುಬಂದಿದ್ದು, ಮಹಿಳೆಯರು ಮತ್ತು ಮಕ್ಕಳು ಬಸ್ ಸಿಗದೆ ಪರದಾಡಿದರು. ಜನಸಂದಣಿ ಮಿತಿ ಮೀರಿದ ಹಿನ್ನೆಲೆಯಲ್ಲಿ ಪೊಲೀಸರು ಈಶಾ ಫೌಂಡೇಶನ್ ಕಡೆಗೆ ಬರದಂತೆ ಸಾರ್ವಜನಿಕರಿಗೆ ಸೂಚನೆ ನೀಡಿದ್ದರು. ಆದರೆ, ಭಕ್ತರು ಪೊಲೀಸರ ಸೂಚನೆ ಧಿಕ್ಕರಿಸಿ ಒಳ ನುಗ್ಗಲು ಯತ್ನಿಸಿದಾಗ ಸ್ಥಳದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಯಿತು. ನೂರಾರು ಎಕರೆ ಪ್ರದೇಶದ ಪಾರ್ಕಿಂಗ್ ಸ್ಥಳಗಳು ಭರ್ತಿಯಾಗಿದ್ದು, ವಾಹನಗಳನ್ನು ನಿಲ್ಲಿಸಲು ಜಾಗವಿಲ್ಲದೆ ಸಾರ್ವಜನಿಕರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಪೊಲೀಸರು ಮತ್ತು ಈಶಾ ಸ್ವಯಂಸೇವಕರು ಜನರನ್ನು ನಿಯಂತ್ರಿಸಲು ಹರಸಾಹಸ ಪಡುತ್ತಿದ್ದಾರೆ. ಒಂದೆಡೆ ಆಧ್ಯಾತ್ಮಿಕ ಸಂಭ್ರಮವಿದ್ದರೆ, ಮತ್ತೊಂದೆಡೆ ಅರಣ್ಯದ ಬೆಂಕಿ ಮತ್ತು ಟ್ರಾಫಿಕ್ ಅವಾಂತರಗಳು ಈ ಬಾರಿಯ ಶಿವರಾತ್ರಿಯನ್ನು ಸವಾಲಾಗಿಸಿವೆ.

## ಬಿಗ್ ಬಾಸ್ ಸ್ಪರ್ಧಿಗೆ ಬಂತು ಬೆದರಿಕೆ; 10 ಕೋಟಿ ರೂಪಾಯಿಗೆ ಬೇಡಿಕೆ

ಬಾಲಿವುಡ್ ಸೆಲೆಬ್ರಿಟಿಗಳಿಗೆ ಬೆದರಿಕೆ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಮೊದಲು ನಿರ್ಮಾಪಕ–ನಿರ್ದೇಶಕ ರೋಹಿತ್ ಶೆಟ್ಟಿ ಅವರ ಕಟ್ಟಡದ ಬಳಿ ಗುಂಡಿನ ದಾಳಿ ನಡೆದಿತ್ತು, ನಂತರ ನಟ ರಣವೀರ್ ಸಿಂಗ್ ಅವರಿಗೆ ಆಡಿಯೋ ಸಂದೇಶದ ಮೂಲಕ ಬೆದರಿಕೆ ಬಂತು. ಈಗ 'ಬಿಗ್ ಬಾಸ್ 13' ಖ್ಯಾತಿಯ ನಟಿ ಹಿಮಾಂಶಿ ಖುರಾನಾ ಅವರನ್ನು 10 ಕೋಟಿ ರೂ. ಪಾವತಿಸಲು ಹೇಳಿ ಬೆದರಿಸಲಾಗಿದೆ.

ಹಿಮಾಂಶಿ ಪಂಜಾಬಿ ಚಲನಚಿತ್ರೋದ್ಯಮದ ಪ್ರಸಿದ್ಧ ನಟಿ. ಅವರು ಮೊಹಾಲಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಸೋಹಾನಾ ಪೊಲೀಸ್ ಠಾಣೆಯಲ್ಲಿ ಆ ಬೆದರಿಕೆ ಸಂಬಂಧಿತ ದಾಖಲಾಗಿದೆ. ಬೆದರಿಕೆ ಇ–ಮೇಲ್ ಅವರ ವೈಯಕ್ತಿಕ ಐಡಿಗೆ ಬಂದಿದೆ, ಇದರಲ್ಲಿ ಒಂದು ಕಿರು ಸಂದೇಶ ಮತ್ತು ವಿದೇಶಿ ದರೋಡೆಕೋರನ ಆಡಿಯೋ ಕ್ಲಿಪ್ ಸೇರಿದೆ. ಪಿಟಿಐ ವರದಿಯ ಪ್ರಕಾರ, ಸಂದೇಶ ವಿದೇಶದಲ್ಲಿರುವ ದರೋಡೆಕೋರರಿಂದ ಕಳುಹಿಸಲಾದುದು ಎಂದು ತಿಳಿದು ಬಂದಿದೆ.

ಹಿಮಾಂಶಿ ಮತ್ತು ಅವರ ಕುಟುಂಬ ಭಯಭೀತರಾಗಿದ್ದು, ತಕ್ಷಣ ಪೊಲೀಸರು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ. ಬೆದರಿಕೆಯಲ್ಲಿ ಜೀಶನ್ ಅಖ್ತರ್ ಹೆಸರು ಉಲ್ಲೇಖವಾಗಿದೆ; ಅವರು 2024 ಅಕ್ಟೋಬರ್‌ನಲ್ಲಿ ಮುಂಬೈನಲ್ಲಿ ನಡೆದ ಎನ್‌ಸಿಪಿ ನಾಯಕ ಬಾಬಾ ಸಿದ್ದಿಕಿ ಕೊಲೆ ಪ್ರಕರಣದ ಸಂದರ್ಭಗಳಲ್ಲಿ ಸಂಪರ್ಕ ಹೊಂದಿದ್ದ ಎನ್ನಲಾಗಿದೆ. ಅಖ್ತರ್ ಲಾರೆನ್ಸ್ ಬಿಷ್ಣೋಯ್, ಗೋಲ್ಡಿ ಬ್ರಾರ್, ರೋಹಿತ್ ಗೋದಾರ ಸೇರಿದಂತೆ ಕೆಲವು ಗ್ಯಾಂಗ್ ಸದಸ್ಯರೊಂದಿಗೆ ಸಂಬಂಧ ಹೊಂದಿದ್ದಾನೆ.

ಹಿಮಾಂಶಿ 16 ವರ್ಷ ವಯಸ್ಸಿನಲ್ಲಿ ಮಾಡೆಲಿಂಗ್ ಆರಂಭಿಸಿ, 2011 ರಲ್ಲಿ ಮಿಸ್ ಲುಧಿಯಾನ ಪ್ರಶಸ್ತಿ ಗೆದ್ದರು. ಅವರು 'ಬಿಗ್ ಬಾಸ್ 13' ಸ್ಪರ್ಧಿಯಾಗಿ ಭಾಗವಹಿಸಿದ್ದರು ಮತ್ತು ಸಾಮಾಜಿಕ ಮಾಧ್ಯಮದಲ್ಲಿ 1.2 ಕೋಟಿಗೂ ಹೆಚ್ಚು ಅನುಯಾಯಿಗಳನ್ನು ಹೊಂದಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.